# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 69 | THURSDAY 21-05-2026 | PRGI No : KNKAN/26/A0962 | Pages:4 | Rs.2.00 | M: 9742418836

## ಬಿಡದಿ ಟೌನ್‌ಶಿಪ್‌ಗೆ ಒಪ್ಪಿದ ರೈತರು; HDK ವಿರೋಧದ ನಡುವೆ ಜೂನ್ 1 ರಿಂದಲೇ ಹಣ ಬಿಡುಗಡೆ: ಡಿಕೆಶಿ ಮಹತ್ವದ ಘೋಷಣೆ



ಬೆಂಗಳೂರು: ರಾಮನಗರ ಬಳಿಯ ಬಿಡದಿಯಲ್ಲಿ ಪ್ರಸ್ತಾವಿತ ಗ್ರೇಟರ್ ಬೆಂಗಳೂರು ಟೌನ್‌ಶಿಪ್ ಯೋಜನೆಗೆ ಸುಮಾರು ಶೇ. 80 ರಷ್ಟು ರೈತರು ಒಪ್ಪಿಗೆ ನೀಡಿದ್ದು, ಜೂನ್ ಮೊದಲ ವಾರದಲ್ಲಿ ಪರಿಹಾರ ವಿತರಣೆ ಪ್ರಾರಂಭವಾಗಲಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬುಧವಾರ ಘೋಷಿಸಿದ್ದಾರೆ.

ಯೋಜನೆಗೆ ವಿರೋಧ ವ್ಯಕ್ತಪಡಿಸಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್ ಅವರು, ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲೇ ಟೌನ್‌ಶಿಪ್ ಬಗ್ಗೆ ಪ್ರಸ್ತಾಪಿಸಿದ್ದರು ಎಂದು ತಿರುಗೇಟು ನೀಡಿದರು.

ಜೆಡಿಎಸ್ ನಾಯಕರೊಂದಿಗೆ ಅವರು ಆಯ್ಕೆ ಮಾಡಿದ ಯಾವುದೇ ಸ್ಥಳ ಮತ್ತು ಸಮಯದಲ್ಲಿ ಸಾರ್ವಜನಿಕ ಚರ್ಚೆಗೆ ಸಿದ್ಧನಿದ್ದೇನೆ ಎಂದು ಡಿಸಿಎಂ ಸವಾಲು ಹಾಕಿದರು.

ಬಿಡದಿ ಗ್ರೇಟರ್ ಬೆಂಗಳೂರು ಟೌನ್‌ಶಿಪ್ ಯೋಜನೆ ಕುರಿತು ಇಂದು ರೈತರೊಂದಿಗೆ ಮಹತ್ವದ ಸಭೆ ನಡೆಸಿದ ಬಳಿ ಸುದ್ದಿಗೋಷ್ಠಿ ನಡೆಸಿ ವಿವರ ನೀಡಿದ ಡಿಸಿಎಂ, "ನಮ್ಮ ಗ್ರೇಟರ್ ಬೆಂಗಳೂರು ಟೌನ್‌ಶಿಪ್ ವಿಷಯಕ್ಕೆ ಸಂಬಂಧಿಸಿದಂತೆ ಎಲ್ಲಾ ರೈತರು ಬಂದಿದ್ದರು. ಅವರಿಗೆ ಪರಿಹಾರದ ಕುರಿತು ನಾನು ಈಗಾಗಲೇ ಘೋಷಣೆ ಮಾಡಿದ್ದೇನೆ. ಹೆಚ್ಚು ಕಡಿಮೆ ಶೇ. 80 ರಷ್ಟು ರೈತರು ಬಂದು ತಮ್ಮ ಒಪ್ಪಿಗೆ ನೀಡಿದ್ದಾರೆ. ಪರಿಹಾರವನ್ನು ಆದಷ್ಟು ಬೇಗ ಬಿಡುಗಡೆ ಮಾಡುವಂತೆ ಅವರು ನಮ್ಮನ್ನು(ರಾಜ್ಯ ಸರ್ಕಾರ) ಒತ್ತಾಯಿಸಿದರು" ಎಂದು ಬೆಂಗಳೂರು ಅಭಿವೃದ್ಧಿ ಖಾತೆಯನ್ನು ಹೊಂದಿರುವ ಶಿವಕುಮಾರ್ ಹೇಳಿದರು.

## ಅಧಿಕಾರ ಸಿಕ್ಕ ಸಂದರ್ಭದಲ್ಲಿ ಕೊಟ್ಟು ಹೋಗಬೇಕು, ಇಲ್ಲದಿದ್ದರೆ ಬಿಟ್ಟು ಹೋಗಬೇಕು; 2028ರಲ್ಲಿ ಮತ್ತೆ ಕಾಂಗ್ರೆಸ್: ತುಮಕೂರಿನಲ್ಲಿ ಅಬ್ಬರಿಸಿದ DK ಶಿವಕುಮಾರ್

ತುಮಕೂರು: 17 ಜನ ಶಾಸಕರನ್ನು ಇಟ್ಕೊಂಡು ಹರೀತಿನಿ, ಹರೀತಿನಿ ಅಂದ್ರೆ ಆಗುತ್ತಾ? ಇನ್ನು ನಿಮ್ಮ ಸರ್ಕಾರ ಅಧಿಕಾರಕ್ಕೆ ಬರುತ್ತದೆ ಎಂದು ಮಾತಾಡುವುದು ಬೇಡ ಎಂದು ಮುಂದಿನ ಸರ್ಕಾರ ನಮ್ಮದೇ ಎಂದ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿಗೆ ಡಿಸಿಎಂ ಡಿಕೆ ಶಿವಕುಮಾರ್ ತುಮಕೂರಿನ ಸಾರ್ಥಕ ಸೇವೆಯ ಸಮರ್ಪಣೆ ಸಮಾವೇಶದಲ್ಲಿ ಟಾಂಗ್ ಕೊಟ್ಟಿದ್ದಾರೆ.

2028 ಕ್ಕೆ ಈ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮತ್ತೆ ಅಧಿಕಾರಕ್ಕೆ ಬಂದೇ ಬರುತ್ತದೆ. ಜನತಾದಳ ಹಾಗೂ ಬಿಜೆಪಿಯವರು ಇದನ್ನು ಬರೆದಿಟ್ಟುಕೊಳ್ಳಿ. ಜನರು ಕೂಡ ಇದನ್ನು ನೆನಪಿನಲ್ಲಿಟ್ಟುಕೊಳ್ಳಿ. ಎಂದು ಡಿಸಿಎಂ ಹೇಳಿದ್ದಾರೆ.

**ಕೊಟ್ಟ ಕುದುರೆ ಏರಲು ಆಗದ ಕುಮಾರಸ್ವಾಮಿ**

ಮೊನ್ನೆ ತಾನೆ ಕುಮಾರಸ್ವಾಮಿಯವರು ಬೆಂಗಳೂರು ನಗರದಲ್ಲಿ ಬಿ ಖಾತೆಯಿಂದ ಎ ಖಾತೆ ಮಾಡಿಸಬೇಡಿ, ನಮ್ಮ ಸರ್ಕಾರ ಬಂದು ಬಿಡುತ್ತದೆ. ನೀವು ಯಾರೂ ದುಡ್ಡು ಕೊಡಲು ಹೋಗಬೇಡಿ. ನಾವು ಮಾಡುತ್ತೇವೆ ಎಂದು ಮಾತಾಡಿದ್ದಾರೆ. ಅದಕ್ಕೆ ಹಿಂದೆಯೇ ನಾನು ಉತ್ತರ



ನೀಡಿದ್ದೇ. ಕೊಟ್ಟ ಕುದುರೆಯನ್ನು ಏರಲು ಆಗದವನು ವೀರನೂ ಅಲ್ಲ ಶೂರನೂ ಅಲ್ಲ.

ಅಧಿಕಾರ ಕೊಟ್ಟಾಗ ನಿಮಗೇನೂ ಮಾಡುವುದಕ್ಕೆ ಆಗಲಿಲ್ಲ. ಅಧಿಕಾರ ಇಲ್ಲದೆ ಹೋದಾಗ ಬರೀ ಹದಿನೇಳು ಜನರನ್ನು ಇಟ್ಟುಕೊಂಡು ಹರಿತೀನಿ, ಹರಿತೀನಿ, ಹರಿತೀನಿ ಅಂದ್ರೆ, ನಿಮ್ಮ ಕೈಯಲ್ಲಿ ಏನೂ ಮಾಡಲಿಕ್ಕೆ ಸಾಧ್ಯ ಇಲ್ಲ. ನಿಮ್ಮ ಶಾಸಕರು ವಿಧಾನಸಭೆಯಲ್ಲಿ ಬಡವರ ಬಗ್ಗೆ ಒಂದಿನವೂ ಮಾತಾಡಿಲ್ಲ. ನಿಮ್ಮಲ್ಲಿರುವಂತಹ ಸಮಸ್ಯೆ ಬಗೆಹರಿಸಿಕೊಳ್ಳುವುದಕ್ಕೆ ನಿಮ್ಮ ಹತ್ತಿರ ಸಮಯ ಇಲ್ಲ. ಇನ್ನು ನಿಮ್ಮ ಸರ್ಕಾರ ಅಧಿಕಾರಕ್ಕೆ ಬರುತ್ತದೆ ಎಂದು ಮಾತಾಡುವುದು ಬೇಡ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಸರ್ಕಾರ ರಾಜ್ಯದ ಜನರ ಬದುಕಿನಲ್ಲಿ ಬದಲಾವಣೆ ತಂದಿದೆ. ಇಡೀ ದೇಶಕ್ಕೆ ಒಂದು ಮಾದರಿ ಸರ್ಕಾರವನ್ನು ಕೊಟ್ಟಿದೆ, ಅದನ್ನು ಉಳಿಸಿಕೊಂಡು ಹೋಗುತ್ತೇವೆ. ನಿಮ್ಮ ಆಶೀರ್ವಾದ ಸದಾ ಇರಲಿ. ಪರಿಶ್ರಮ ಇದ್ದ ಕಡೆ ಇತಿಹಾಸ ಸೃಷ್ಟಿ ಆಗುತ್ತದೆ. ನಂಬಿಕೆ ಇದ್ದ ಕಡೆ ಅದ್ಭುತಗಳು ನಡೆಯುತ್ತವೆ. ಸತ್ಯ ಇದ್ದ ಕಡೆ ಗೆಲುವು ಇದ್ದೇ ಇರುತ್ತದೆ ಎಂದು ಹೇಳಿದರು.

ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲಯದವರು ನಡೆಸಿದ ಅಧ್ಯಯನದ ಪ್ರಕಾರ, ಕರ್ನಾಟಕದ ಪಂಚ ಗ್ಯಾರಂಟಿಗಳು ಇಡೀ ವಿಶ್ವದಲ್ಲೇ ಬಡವರ ಬದುಕಿನಲ್ಲಿ ಸಾಮಾಜಿಕ ಬದಲಾವಣೆಯನ್ನು ತಂದಂತಹ ಕಾರ್ಯಕ್ರಮಗಳಾಗಿವೆ. ಇವು ವಿಶ್ವಕ್ಕೆ ಒಂದು ಮಾದರಿ ಎಂದರು.

ನಾವು ಅಂದು ಜನಸಾಮಾನ್ಯರ ಜೀವನ ಉಳಿಯಬೇಕು ಎಂದು ಬದ್ಧತೆಯಿಂದ ಕೆಲಸ ಮಾಡಿದೆವು. ಈಗ ಎಲ್ಲ ಅಗತ್ಯ ವಸ್ತುಗಳ ಬೆಲೆ ಗಗನಕ್ಕೆ ಹೋಗುತ್ತಿದೆ. ಆದಾಯ ಪಾತಳಕ್ಕೆ ಇಳಿದಿದೆ. ಇಂತಹದಕ್ಕೆ ಸಹಾಯ ಮಾಡಬೇಕು ಅಂತಲೇ ನಾವು ಗ್ಯಾರಂಟಿ ಯೋಜನೆಗಳನ್ನು ಪ್ರಾರಂಭ ಮಾಡಿದೆವು. ಈಗ ವಿರೋಧ ಪಕ್ಷಗಳು ಸಹ ನಮ್ಮ ಜನಪರ ಗ್ಯಾರಂಟಿ ಮಾದರಿಯನ್ನೇ ಅನುಸರಿಸುತ್ತಿವೆ ಎಂದರು.

**ಎಲ್ಲರ ಗೆಲುವಿಗೆ ಗ್ಯಾರಂಟಿಗಳು ಸ್ಫೂರ್ತಿ**

ಕೇರಳ, ತಮಿಳುನಾಡು, ಆಂಧ್ರ, ತೆಲಂಗಾಣ, ಮಹಾರಾಷ್ಟ್ರ ಜೊತೆಗೆ ಬಿಜೆಪಿ ಸರ್ಕಾರ ಇರೋ ರಾಜ್ಯಗಳು, ಎಲ್ಲಾ ಸರ್ಕಾರಗಳು ಕೂಡ ನಮ್ಮ ಗ್ಯಾರಂಟಿಗಳನ್ನೇ ಅನುಸರಿಸುತ್ತಿವೆ. ಅವರ ಚುನಾವಣೆ ಜಯಕ್ಕೆ ನಮ್ಮ ಗ್ಯಾರಂಟಿಗಳೇ ಸ್ಫೂರ್ತಿಯಾಗಿವೆ. ವಿರೋಧ ಪಕ್ಷದವರು ಟೀಕೆ ಮಾಡ್ತಾರೆ. ಆ ಟೀಕೆ ನಾವು ಯಾವತ್ತೂ ತಲೆ ಕೆಡಿಸಿಕೊಳ್ಳಲ್ಲ. ಏಕೆಂದರೆ ಟೀಕೆಗಳು ಸಾಯುತ್ತವೆ, ನಮ್ಮ ಕೆಲಸಗಳು ಮಾತ್ರ ಉಳಿಯುತ್ತವೆ. ನಮ್ಮನ್ನ ಟೀಕೆ ಮಾಡುವ ವಿರೋಧ ಪಕ್ಷದವರಿಗೆ ನಮ್ಮ ಕಾರ್ಯಕ್ರಮಗಳೇ ಉತ್ತರ ಎಂದರು.

## ತೆಲಸಂಗ ಕುಂಬಾರ ಗುರುಪೀಠದಲ್ಲಿ ಜಟಾಪಟಿ; ಸ್ವಾಮೀಜಿ ಪರ ವಿರೋಧ ಗುಂಪುಗಳ ಮುಖಂಡರ ನಡುವೆ ವಾಗ್ವಾದ, ಪೊಲೀಸರ ಮಧ್ಯಪ್ರವೇಶ



**ಬೆಳಗಾವಿ ವಾರ್ತೆ ಅಥಣಿ (ತೆಲಸಂಗ):** ಇತ್ತೀಚೆಗಷ್ಟೇ ನಡೆದ ಪಂಚಮಸಾಲಿ ಸಮಾಜದ ಗುರುಪೀಠದ ಟ್ರಸ್ಟ್ ವಿವಾದದ ಬೆನ್ನಲ್ಲೇ, ಇದೀಗ ರಾಜ್ಯದ ಪ್ರಥಮ ಕುಂಬಾರ ಸಮಾಜದ ಗುರುಪೀಠದಲ್ಲೂ ಭಿನ್ನಮತ ಸ್ಫೋಟಗೊಂಡಿದೆ. ಟ್ರಸ್ಟ್ ವಿಚಾರವಾಗಿ ಸಮಾಜದ ಮುಖಂಡರು ಎರಡು ಗುಂಪುಗಳಾಗಿ ಪರಸ್ಪರ ಆರೋಪ–ಪ್ರತ್ಯಾರೋಪಗಳಲ್ಲಿ ತೊಡಗಿದ್ದರಿಂದ, ಅಥಣಿ ತಾಲೂಕಿನ ತೆಲಸಂಗ ಗ್ರಾಮದ ಕುಂಬಾರ ಗುರುಪೀಠದಲ್ಲಿ ತೀವ್ರ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು. ಕೊನೆಗೆ ಪೊಲೀಸರ ಮಧ್ಯಪ್ರವೇಶದಿಂದ ಸದ್ಯಕ್ಕೆ ಪರಿಸ್ಥಿತಿ ತಿಳಿಯಾಗಿದೆ.

ತೆಲಸಂಗ ಗ್ರಾಮದ ಕುಂಬಾರ ಗುರುಪೀಠದ ಶ್ರೀಮಠದಲ್ಲಿ ಮೇ 24ರಂದು ನೂತನ ಕಲ್ಯಾಣ ಮಂಟಪದ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಕುಂಬಾರ ಸಮುದಾಯದ ಒಂದು ಗುಂಪು ಇಂದು ಸಭೆ ಸೇರಿ ಪತ್ರಿಕಾಗೋಷ್ಠಿಗೆ ಸಜ್ಜಾಗಿತ್ತು. ಮೇ 24ರ ಕಲ್ಯಾಣ ಮಂಟಪ ಉದ್ಘಾಟನಾ ಕಾರ್ಯಕ್ರಮವನ್ನು ಸಮಾಜದ ಎಲ್ಲರಿಗೂ ತಿಳಿಸದೆ ಏಕಪಕ್ಷೀಯವಾಗಿ ಹಮ್ಮಿಕೊಳ್ಳಲಾಗಿದೆ. ಮಠದ ಆಡಳಿತಕ್ಕಾಗಿ ಎಷ್ಟು ಬಾರಿ ಒತ್ತಾಯಿಸಿದರೂ ಸಮಿತಿ (ಕಮಿಟಿ) ರಚನೆ ಮಾಡುತ್ತಿಲ್ಲ. ಶ್ರೀಮಠದ ಉತ್ತರಾಧಿಕಾರಿಯು ಕಡ್ಡಾಯವಾಗಿ ಕುಂಬಾರ ಸಮಾಜಕ್ಕೆ ಸೇರಿದವರೇ ಆಗಿರಬೇಕು ಎಂಬ ನಿಯಮವನ್ನು ಮಠದ ಬೈಲಾದಲ್ಲಿ (ನಿಯಮಾವಳಿ) ಸೇರಿಸಬೇಕು. ಶ್ರೀಮಠದಲ್ಲಿ ಪೂಜೆ ಪುನಸ್ಕಾರಗಳಿಗೆ ನಿಷೇಧ ಹೇರಲಾಗಿದೆ ಹಾಗೂ ಮಠದ ಕಲ್ಯಾಣ ಮಂಟಪದ ದ್ವಾರಬಾಗಿಲ ಮೇಲಿದ್ದ ಗಣಪತಿಯ ಚಿತ್ರವನ್ನು ಕಿತ್ತಿ ತೆಗೆಸಲಾಗಿದೆ ಎಂದು ಒಂದು ಗುಂಪು ಆರೋಪಿಸಿತು.

ಒಂದು ಗುಂಪು ಈ ಮೇಲಿನ ಆರೋಪಗಳನ್ನು ಮಾಡಿ ಪತ್ರಿಕಾಗೋಷ್ಠಿ ನಡೆಸಲು ಮುಂದಾದಾಗ, ಕುಂಬಾರ ಗುರುಪೀಠದ ಪೂಜ್ಯರಾದ ಬಸವ ಗುಂಡಯ್ಯ ಸ್ವಾಮೀಜಿ ಹಾಗೂ ಅವರ ಬೆಂಬಲಿಗರು ನೇರವಾಗಿ ಪತ್ರಿಕಾಗೋಷ್ಠಿ ನಡೆಯುತ್ತಿದ್ದ ಸ್ಥಳಕ್ಕೆ ನುಗ್ಗಿದರು.

ವೇದಿಕೆಯ ಮೇಲೆ ಕುರ್ಚಿಗಳನ್ನು ಹಾಕಿ ಆಸೀನರಾದರು. ಈ ವೇಳೆ ಎರಡೂ ಗುಂಪುಗಳ ನಡುವೆಜೋರು ವಾಗ್ವಾದ ನಡೆದು, ಪರಿಸ್ಥಿತಿ ಕೈಮೀರುವ ಹಂತ ತಲುಪಿತು. ಸ್ಥಳದಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ನಿಯೋಜನೆಗೊಂಡಿದ್ದ ಐಗಳಿ ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ತಕ್ಷಣವೇ ಮಧ್ಯಪ್ರವೇಶಿಸಿದರು. ಜಗಳವಾಡುತ್ತಿದ್ದ ಎರಡೂ ಗುಂಪುಗಳನ್ನು ಸಮಾಧಾನಪಡಿಸಿ, ಪರಿಸ್ಥಿತಿಯನ್ನು ಹತೋಟಿಗೆ ತಂದರು.

ದೊಡ್ಡ ಮಟ್ಟದ ಗದ್ದಲದ ನಂತರ ಕೊನೆಗೆ ಪೂಜ್ಯ ಬಸವ ಗುಂಡಯ್ಯ ಸ್ವಾಮೀಜಿಯವರು ಮಹತ್ವದ ಭರವಸೆಯೊಂದನ್ನು ನೀಡಿದರು. ಮೇ 24ರಂದು ನಡೆಯಲಿರುವ ಕಲ್ಯಾಣ ಮಂಟಪದ ಉದ್ಘಾಟನಾ ಸಮಾರಂಭ ಮುಗಿದ ತಕ್ಷಣವೇ ಶ್ರೀಮಠಕ್ಕೆ ನೂತನ ಕಮಿಟಿ ರಚನೆ ಮಾಡಲಾಗುವುದು. ಅಲ್ಲದೆ, ಕುಂಬಾರ ಸಮಾಜದವರನ್ನೇ ಮಠದ ಉತ್ತರಾಧಿಕಾರಿಯನ್ನಾಗಿ ಸ್ವೀಕರಿಸಲಾಗುವುದು ಎಂದು ಸ್ವಾಮೀಜಿ ಸ್ಪಷ್ಟಪಡಿಸಿದರು.

ಸ್ವಾಮೀಜಿಯವರ ಈ ನಿರ್ಧಾರಕ್ಕೆ ಭಿನ್ನಮತ ಹೊಂದಿದ್ದ ಇನ್ನೊಂದು ಗುಂಪು ಸಮ್ಮತಿ ಸೂಚಿಸಿದ್ದರಿಂದ ಸದ್ಯಕ್ಕೆ ವಿವಾದ ಸುಖಾಂತ್ಯಗೊಂಡಂತಾಗಿದೆ. ಆದಾಗ್ಯೂ, ಮೇ 24ರ ಕಾರ್ಯಕ್ರಮದ ನಂತರದ ಬೆಳವಣಿಗೆಗಳ ಮೇಲೆ ಸಮಾಜದ ಬಾಂಧವರು ಕಣ್ಣಿಟ್ಟಿದ್ದು, ಚಿಕ್ಕ ಸಮುದಾಯ. ರಾಜ್ಯದಲ್ಲಿರುವುದು ಕುಂಬಾರ ಗುರಪೀಠ ಒಂದೇ ಆಗಿದ್ದು ನಮ್ಮನಮ್ಮಲ್ಲಿಯೇ ಕಚ್ಚಾಟ ಬೇಡ ಎಂಬ ಮುಖಂಡರ ಅಭಿಪ್ರಾಯಕ್ಕೆ ಸಮ್ಮತಿಸಿ ಸಭೆ ಶಾಂತಗೊಂಡಿತು.

ಸಮಾಜದ ಮುಖಂಡರಾದ ನಿವೃತ್ತ ಡಿವಾಯ್‌ಎಸ್‌ಪಿ ಸೋಮಲಿಂಗ, ಬಿ.ಜಿ.ನಾಗೂರ, ಬಸವರಾಜ ಕುಂಬಾರ, ಗುರುರಾಜ ಕುಂಬಾರ, ಜಡೆಪ್ಪಾ ಕುಂಬಾರ, ಸದಾನಂದ ಕುಂಬಾರ, ರಮೇಶ ಕುಂಬಾರ, ಮಲ್ಲಿಕಾರ್ಜುನ ಕುಂಬಾರ,.ಶಶಿಧರ ಕುಂಬಾರ, ಡಾ.ಎಸ್.ಪಿ.ಕುಂಬಾರ, ಸಿ.ಜಿ.ಕುಂಬಾರ ಸೇರಿದಂತೆ ಅಕೇಕರು ಉಪಸ್ಥಿತರಿದ್ದರು.

## ಊಟದ ವಿಚಾರವಾಗಿ ಶ್ರೀಗಳ ಆರೋಪಕ್ಕೆ ಮುಖಂಡರ ತಿರುಗೇಟು

ಮಠದ ಕೆಲಸ ಕಾರ್ಯಗಳು ಹಾಗೂ ಊಟದ ವ್ಯವಸ್ಥೆಯನ್ನು ನಾನೊಬ್ಬನೇ ಮಾಡಿದ್ದೇನೆ, ನೀವ್ಯಾರೂ ಬಂದಿಲ್ಲ ಎಂಬ ಶ್ರೀ ಬಸವ ಗುಂಡಯ್ಯ ಸ್ವಾಮೀಜಿಯವರ ಆರೋಪವನ್ನು ತೇಲಸಂಗ ಗ್ರಾಮದ ಮುಖಂಡರು ವೇದಿಕೆಯ ಮೇಲೆಯೇ ತೀವ್ರವಾಗಿ ತಳ್ಳಿಹಾಕಿದರು. ಮಠದ ಪ್ರತಿ ಹಂತದಲ್ಲೂ ನಾವು ನಿಮಗೆ ಸಹಾಯ ಮಾಡುತ್ತಲೇ ಬಂದಿದ್ದೇವೆ. ಭಕ್ತರು ಪ್ರತಿ ಮನೆಯಿಂದ ಊಟ ತಂದುಕೊಟ್ಟಿದ್ದಾರೆ. ಆದರೆ ಇಂದು ಅದೇ ಊಟದ ವಿಚಾರದಲ್ಲಿ ಉಂಡಮನೆಯ ಜಂತಿ ಎಣಿಸುವ ಹೀಯಾಳಿಸುವ ಕೆಲಸ ಮಾಡಿದ್ದು ನಮಗೆ ತೀವ್ರ ಬೇಸರ ತಂದಿದೆ ಎಂದು ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು. ಮಠದ ಕಮಿಟಿ ರಚನೆ, ಉತ್ತರಾಧಿಕಾರಿ ನೇಮಕ ಹಾಗೂ ಎಲ್ಲ ಜಿಲ್ಲೆಗಳ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ವಿಷಯದಲ್ಲಿ ನೀವು ಮೊಂಡುತನ ಪ್ರದರ್ಶಿಸುತ್ತಿದ್ದೀರಿ. ನಿಮ್ಮ ಇಂತಹ ಏಕಪಕ್ಷೀಯ ನಿರ್ಧಾರಗಳು ಮತ್ತು ಮುಂದೂಡುವ ತಂತ್ರಗಳು ಸಮಾಜವನ್ನು ಕಟ್ಟುವ ಬದಲಾಗಿ ಒಡೆಯುತ್ತವೆ ಎಂದು ಮುಖಂಡರು ಸ್ವಾಮೀಜಿ ಎದುರೇ ಆಕ್ರೋಶ ಹೊರಹಾಕಿದರು. ಕೊನೆಗೆ, ಮೇ 24ರ ಕಾರ್ಯಕ್ರಮ ಮುಗಿದ ತಕ್ಷಣವೇ ಮತ್ತೆ ಸಭೆ ಸೇರಿ, ಶ್ರೀಗಳು ನೀಡಿದ ಭರವಸೆಯ ಅನುಷ್ಠಾನದ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖಂಡರು ತಿಳಿಸಿದರು.



ಗೋಕಾಕ: ನಗರದ ಮಯೂರ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿ ಚೈತ್ರಾ ಚವ್ಹಾನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮರು ಮೌಲ್ಯ ಮಾಪನದಲ್ಲಿ 617(98.72) ಅಂಕ ಪಡೆದು ರಾಜ್ಯಕ್ಕೆ 9ನೇ ರ್‍ಯಾಂಕ ಪಡೆದಿದ್ದಾರೆ. ಈ ವಿದ್ಯಾರ್ಥಿನಿಯನ್ನು ಸಂಸ್ಥೆಯ ಅಧ್ಯಕ್ಷ ಹಾಗೂ ವಿಧಾನ ಪರಿಷತ ಸದಸ್ಯ ಲಖನ ಜಾರಕಿಹೊಳಿ, ಕಾರ್ಯದರ್ಶಿ ಸದಾನಂದ ಕಲಾಲ, ಆಡಳಿತಾಧಿಕಾರಿ ಎಸ್ ಡಿ ಮುರಗೋಡ, ಮುಖ್ಯೋಪಾಧ್ಯಾಯಿನಿ ಸುಚಿತ್ರಾ ಹತಪಾಕಿ ಸತ್ಕರಿಸಿದರು.

## ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ



ಗೋಕಾಕ: ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ಕಾರ್ಯಕರ್ತರು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮಂಗಳವಾರದಂದು ಪ್ರತಿಭಟನೆ ನಡೆಸಿ ತಹಶೀಲದಾರ ಮೂಲಕ ರಾಜ್ಯ ಸರಕಾರಕ್ಕೆ ಮನವಿ ಸಲ್ಲಿಸಿದರು.

**ಬೆಳಗಾವಿ ವಾರ್ತೆ ಗೋಕಾಕ:** ಕರ್ನಾಟಕ ರಾಜ್ಯ ರೈತ ಸಂಘ ಹಸೀರು ಸೇನೆಯ ಕಾರ್ಯಕರ್ತರು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮಂಗಳವಾರದಂದು ಪ್ರತಿಭಟನೆ ನಡೆಸಿ ತಹಶೀಲದಾರ ಮೂಲಕ ರಾಜ್ಯ ಸರಕಾರಕ್ಕೆ ಮನವಿ ಸಲ್ಲಿಸಿದರು. ಯೂರಿಯಾ ರಸಗೊಬ್ಬರಕ್ಕೆ ಎಫ್‌ಐಡಿ ತೆಗೆಯಬೇಕು ಮತ್ತು ಯಾವುದೇ ಲಿಂಕ್ ಇಲ್ಲದೆ ರೈತರಿಗೆ ನೇರವಾಗಿ ಅವಶ್ಯವಿರುವ ಯೂರಿಯಾ ರಸಗೊಬ್ಬರವನ್ನಷ್ಟೇ ವಿತರಿಸಬೇಕು. ಅಕಾಲಿಕ ಮಳೆಯಿಂದ ಬೆಳೆಗಳು ನಾಶವಾಗಿದ್ದು ತಕ್ಷಣವೇ ಸಮೀಕ್ಷೆ ಮಾಡಿ ಪರಿಹಾರ ನೀಡಬೇಕು. ಹೊಸ ಪಡಿತರ ಚೀಟಿ ವಿತರಣೆ ಸ್ಥಗಿತಗೊಳಿಸಿದ್ದು ತಕ್ಷಣವೇ ಪ್ರಾರಂಭಿಸಬೇಕು. ತೋಟದ ಮನೆಗಳಿಗೆ ಸಾಯಂಕಾಲ 6 ಘಂಟೆಯಿಂದ ಬೆಳಿಗ್ಗೆ 6 ಘಂಟೆಯ ವರೆಗೆ ಸಿಂಗಲ್ ಫೇಸ್ ಮತ್ತು ಐ ಪಿ ಸೆಟಗಳಿಗೆ ಹಗಲು, 7 ಘಂಟೆಗಳ ಕಾಲ ನಿರಂತರವಾಗಿ ವಿದ್ಯುತ್ ಪೂರೈಸಬೇಕು. ಮೈಕ್ರೋ ಫೈನಾನ್ಸ್‌ಗಳಿಂದ ರೈತರಿಗೆ ತೊಂದರೆ ಆಗುತ್ತಿದು ತಕ್ಷಣವೇ ಅವರ ಜೊತೆ ಸಭೆ ಮಾಡಿ ಸರಿಪಡಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಿದರು.

ಕರ್ನಾಟಕ ರಾಜ್ಯ ರೈತ ಸಂಘ ಹಸೀರು ಸೇನೆಯ ಮಂಜುನಾಥ ಪೂಜೇರಿ, ವಾಸು ಪಂದ್ರೋಳಿ, ಕುಮಾರ ತಿಗಡಿ, ಸಿದ್ದಲಿಂಗಪ್ಪ ಪೂಜೇರಿ, ಲಾಲಸಾಬ್ ಶಿವಾಪುರೆ, ರಾಯಪ್ಪ ಗೌಡಪ್ಪನವರ, ಬೀರಪ್ಪ ತೋಳಿನವರ ಸೇರಿದಂತೆ ಅನೇಕರಿದ್ದರು.

## ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟ

**ಬೆಳಗಾವಿ ವಾರ್ತೆ ಬಾಗಲಕೋಟೆ :** ಬಾಗಲಕೋಟೆ ಅಂಚೆ ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಆಸಕ್ತ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣಪತ್ರದ ನಕಲುಗಳೊಂದಿಗೆ ಮೇ 18 ರಂದು ಬೆಳಿಗ್ಗೆ 11 ಗಂಟೆಗೆ ಬಾಗಲಕೋಟೆ ಸ್ಟೇಷನ್ ರಸ್ತೆ ಬಳಿಯಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಸಂದರ್ಶನಕ್ಕೆ ಹಾಜರಾಗುವವರು 10ನೇ ತರಗತಿ ಉತ್ತೀರ್ಣರಾಗಿರುವುದು ಕಡ್ಡಾಯವಾಗಿದೆ. ವಯೋಮಿತಿ 18 ರಿಂದ ಗರಿಷ್ಟ ವಯೋಮಿತಿ ಇರುವದಿಲ್ಲ. ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗ ನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಎಜೆಂಟರು ಹಾಗೂ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳಿಗೆ ಆಯ್ಕೆಯಾದ ಪಕ್ಷದಲ್ಲಿ ಅವಕಾಶ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಂಚೆ ಜೀವವಿಮಾ ಅಭಿವೃದ್ಧಿ ಅಧಿಕಾರಿಗಳನ್ನು (8217297792, 7337899266) ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಐದು ವರ್ಷದೊಳಗಿನ 2,07,837 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ : ಜಿಲ್ಲಾಧಿಕಾರಿ ಸ್ನೇಹಲ್ ಆರ್



**ಬೆಳಗಾವಿ ವಾರ್ತೆ ಧಾರವಾಡ:** ಬರುವ ಜೂನ 28 ರಿಂದ ಜುಲೈ 1ರ ವರಗೆ ಜಿಲ್ಲೆಯಲ್ಲಿ ಹಮ್ಮಿಕೊಳ್ಳುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಬೇಕು. ಜಿರೋ ದಿಂದ ಐದು ವರ್ಷದೊಳಗಿನ ಯಾವ ಮಗುವು ಪೋಲಿಯೋ ಹನಿಯಿಂದ ಹೊರಗುಳಿಯ ದಂತೆ ಕ್ರಮವಹಿಸಬೇಕು ಈ ನಿಟ್ಟಿನಲ್ಲಿ ಸಮಗ್ರವಾದ ಮತ್ತು ಸಮರ್ಪಕವಾದ ಕ್ರೀಯಾ ಯೋಜನೆಯನ್ನು ಆರೋಗ್ಯ ಇಲಾ ಖೆಯ ಅಧಿಕಾರಿಗಳು ರೂಪಿಸಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ಅವರು ಹೇಳಿದರು.

ಅವರು ಇಂದು ಸಂಜೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಅಂತರ್ ಇಲಾಖಾ ಸಮನ್ವಯ ಸಮಿತಿಯ ಜಿಲ್ಲಾ ಕಾರ್ಯಪಡೆ ಸಭೆಯ ಅಧ್ಯಕ್ಷತೆ ವಹಿಸಿ ಹಾಗೂ ರಾಷ್ಟ್ರೀಯ ಪಲ್ಸ ಪೋಲಿಯೋ ಕಾರ್ಯಕ್ರಮದ ಯಶಸ್ವಿ ಅನುಷ್ಠಾನ ಕುರಿತು ಜರುಗಿದ ಪೂರ್ವಭಾವಿ ಸಭೆ ಜರುಗಿಸಿ ಮಾತನಾಡಿದರು.

ಜಿಲ್ಲೆಯಾದ್ಯಂತ 0-5 ವರ್ಷದ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕು. ಜೂನ್ 28 ರಿಂದ ಜುಲೈ 1 ರವರೆಗೆ ಜಿಲ್ಲೆಯ ವಿವಿಧ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಲಸಿಕಾ ಕಾರ್ಯ ನಡೆಯಲಿದೆ ಎಂದು ಅವರು ಹೇಳಿದರು.

ಜೂನ್ 28ರಂದು ಬೂತ್ ಮಟ್ಟದಲ್ಲಿ ಹಾಗೂ ಜೂನ್ 29 ಮತ್ತು 30ರಂದು ಎರಡು ದಿನಗಳ ಕಾಲ ಗ್ರಾಮೀಣ ಪ್ರದೇಶಗಳಲ್ಲಿ ಹಾಗೂ ಜೂನ್ 29ರಿಂದ ಜುಲೈ 1ರವರೆಗೆ ಮೂರು ದಿನಗಳ ಕಾಲ ನಗರ ಪ್ರದೇಶಗಳಲ್ಲಿ ಮನೆ ಮನೆಗೆ ಭೇಟಿ ನೀಡಿ ಆರೋಗ್ಯ ಕಾರ್ಯಕರ್ತರು 0-5 ವರ್ಷದ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಿದ್ದಾರೆ. ಸಾರ್ವಜನಿಕರು ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಹನಿ ಹಾಕಿಸಬೇಕು ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ ಮಕ್ಕಳ ಸಂಖ್ಯೆ 2,07,837 ಇದ್ದು, 891 ಒಟ್ಟು ಲಸಿಕಾ ಕೇಂದ್ರಗಳು ಸ್ಥಾಪಿಸಲಾಗುತ್ತದೆ. 92 ಟ್ರಾಂಜಿಟ್ ತಂಡಗಳು, 57 ಮೊಬೈಲ್ ತಂಡಗಳು ಕಾರ್ಯನಿರ್ವಹಿಸಲಿವೆ. ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ 3,829 ವ್ಯಾಕ್ಸಿನೇಟರ್‌ಗಳು ಹಾಗೂ 214 ಮೇಲ್ವಿಚಾರಕರು ಭಾಗವಹಿಸಲಿದ್ದಾರೆ. ರಾಷ್ಟ್ರೀಯ ಪಲ್ಸ ಪೋಲಿಯೋ ಕಾರ್ಯಕ್ರಮ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲೆಯ ಒಟ್ಟು 4,28,540 ಮನೆಗಳಿಗೆ ಆರೋಗ್ಯ ಕಾರ್ಯಕರ್ತರು ಭೇಟಿ ನೀಡಲಿದ್ದಾರೆ ಎಂದು ಅವರು ಸಭೆಯಲ್ಲಿ ತಿಳಿಸಿದರು.

ಇದೆ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಮುಂಬರುವ ಮಳೆಗಾಲ ಹಾಗೂ ನಂತರದ ದಿನಗಳಲ್ಲಿ ಮಲೇರಿಯಾ ಡೆಂಘೀ, ಚಿಕನ್‌ಗುನ್ಯಾ ಹಾಗೂ ಕೀಟಜನ್ಯ ರೋಗಗಳು ಹರಡುವ ಸಾಧ್ಯತೆ ಇರುತ್ತದೆ. ಅವುಗಳ ನಿಯಂತ್ರಣ ಹಾಗೂ ಮುಂಜಾಗೃತಾ ಕ್ರಮಗಳ ಕುರಿತು ಜಿಲ್ಲಾ ಮಟ್ಟದ ಅಂತರ್ ಇಲಾಖಾ ಸಮನ್ವಯ ಸಮಿತಿಯ ಸಭೆ ಜರುಗಿತು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಂ.ಹೊನಕೇರಿ ಅವರು ಸ್ವಾಗತಿ, ಪ್ರಾಸ್ತಾವಿಕವಾಗಿ ಮಾತನಾಡಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಯೋಜನೆ ಸಮರ್ಪಕ ಅನುಷ್ಠಾನದ ಕುರಿತು ಸಭೆಯಲ್ಲಿ ವಿವರಿಸಿದರು. ಜಿಲ್ಲಾ ಆರ್.ಸಿ.ಎಚ್.ಓ ಅಧಿಕಾರಿ ಡಾ.ಸುಜಾತಾ ಹಸವೀಮಠ ಅವರು ವಂದಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ ದೇಸಾಯಿ ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮ ಅಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳು ಮತ್ತು ಶಿಕ್ಷಣ, ಗ್ರಾಮೀಣಾಭೀವೃದ್ಧಿ ಮತ್ತು ಪಂಚಾಯತ ರಾಜ್, ಮಹಿಳಾ ಮತ್ತು ಮಕ್ಕಳ್ಳ ಅಭಿವೃದ್ಧಿ, ನಗರಾಭಿವೃದ್ಧಿ, ಅಲ್ಪ ಸಂಖ್ಯಾತರ ಕಲ್ಯಾಣ, ಸಾರಿಗೆ, ಕಾರ್ಮಿಕ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ಆಯುಷ್, ಹೆಸ್ಕಾಂ, ಭಾರತೀಯ ಮಕ್ಕಳ ತಜ್ಞರ ಸಂಘ ಮತ್ತು ಭಾರತೀಯ ವೈದ್ಯಕೀಯ ಸಂಘ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸರ್ಕಾರೇತರ ಸಂಘ, ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಲಿಂಗತ್ವ ಅಲ್ಪಸಂಖ್ಯಾತರು ಶಕ್ತಿ ಯೋಜನೆಯಲ್ಲಿ ಆಗುತ್ತಿರುವ ತಾರತಮ್ಯವನ್ನು ಖಂಡಿಸಿ ಪ್ರತಿಭಟನೆ



ಗೋಕಾಕ: ಮನವಿ ಸಲ್ಲಿಸುತ್ತಿರುವದು.

**ಬೆಳಗಾವಿ ವಾರ್ತೆ ಗೋಕಾಕ:** ಲಿಂಗತ್ವ ಅಲ್ಪಸಂಖ್ಯಾತರು ಶಕ್ತಿ ಯೋಜನೆಯಲ್ಲಿ ಆಗುತ್ತಿರುವ ತಾರತಮ್ಯವನ್ನು ಖಂಡಿಸಿ ನಗರದ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಮೆರವಣಿಗೆ ಮೂಲಕ ಮಿನಿ ವಿಧಾನಸೌಧದ ವರೆಗೆ ತೆರಳಿ ತಹಶೀಲದಾರ ಮೂಖಾಂತರ ಮುಖ್ಯಮಂತ್ರಿಗಳಿಗೆ ಮಂಗಳವಾರದಂದು ಮನವಿ ಸಲ್ಲಿಸಿದರು.

ರಾಜ್ಯದ ಹಲವು ಭಾಗಗಳಲ್ಲಿ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳಿಗೆ ಬಸ್ ಟಿಕೇಟ ನೀಡಲು ಕೆಲ ನಿರ್ವಾಹಕರು ನಿರಾಕರಿಸುವದು, ಗುರುತಿನ ಬಗ್ಗೆ ಪ್ರಶ್ನಿಸಿ ಅವಮಾನ ಮಾಡುವದು ಹಾಗೂ ಸಾರ್ವಜನಿಕವಾಗಿ ಕಿರುಕುಳ ನೀಡುತ್ತಿರುವ ಘಟನೆಗಳ ವಿರುದ್ಧ ಕ್ರಮಕೈಗೊಳ್ಳುವಂತೆ ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಐನಾ ಶೇಕ, ಮೋಹನಗೌಡ ಪಾಟೀಲ, ಮೀಶಾ ತಳವಾರ, ಮುಸಖಾನ, ಜಾಸಮೀನ, ಭೀಮಪ್ಪ ಸೇರಿದಂತೆ ಅನೇಕರು ಇದ್ದರು.

# ಮಹಿಳಾ ಪೊಲೀಸ್ ಠಾಣೆಯು ಮಹಿಳೆಯರಿಗೆ ಸುರಕ್ಷತೆ, ಸುಬದ್ರತೆ, ಆತ್ಮವಿಶ್ವಾಸ ನೀಡುವ ಕೇಂದ್ರಗಳಾಗಬೇಕು

**ಬೆಳಗಾವಿ ವಾರ್ತೆ ಧಾರವಾಡ:** ಮಹಿಳೆಯರ ಮೇಲಿನ ದೌರ್ಜನ್ಯ, ಕಿರುಕುಳ ಹಾಗೂ ಸೈಬರ್ ಅಪರಾಧ ಪ್ರಕರಣ ಗಳಿಗೆ ತ್ವರಿತ ಸ್ಪಂದನೆ ನೀಡುವುದು ಪೊಲೀಸ್ ಇಲಾಖೆಯ ಮೊದಲ ಆದ್ಯತೆಯಾಗಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌದರಿ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಧಾರವಾಡ ಗ್ರಾಮೀಣ ಪೊಲೀಸ್ ಠಾಣೆ ಹತ್ತಿರದ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಿ, ಅಲ್ಲಿನ ಕಾರ್ಯವೈಖರಿ, ಮೂಲಸೌಕರ್ಯಗಳು ಹಾಗೂ ಮಹಿಳೆಯರಿಗೆ ನೀಡಲಾಗುತ್ತಿರುವ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು.

ಮಹಿಳೆಯರು ಯಾವುದೇ ರೀತಿಯ ಅನ್ಯಾಯ, ಶೋಷಣೆ ಅಥವಾ ಕಿರುಕುಳಕ್ಕೆ ಒಳಗಾದಾಗ ಭಯಪಡದೆ ಮುಂದೆ ಬಂದು ದೂರು ನೀಡಬೇಕು. ಮಹಿಳಾ ಪೊಲೀಸ್ ಠಾಣೆಗಳು ಮಹಿಳೆಯರಿಗೆ ಸುರಕ್ಷತೆ ಹಾಗೂ ಆತ್ಮವಿಶ್ವಾಸ ತುಂಬುವ ಕೇಂದ್ರಗಳಾಗಬೇಕು. ಪೊಲೀಸ್ ಸಿಬ್ಬಂದಿ ಮಹಿಳೆಯರೊಂದಿಗೆ ವಿನಯ ಹಾಗೂ ಮಾನವಿಯತೆಯಿಂದ ವರ್ತಿಸಬೇಕು ಎಂದು ಅವರು ಹೇಳಿದರು.

ಠಾಣೆಯ ದಾಖಲೆಗಳು, ಮಹಿಳೆಯರಿಗಾಗಿ ಕಲ್ಪಿಸಲಾದ ಪ್ರತ್ಯೇಕ ಕೊಠಡಿಗಳು, ಸಲಹಾ ಕೇಂದ್ರ ಹಾಗೂ ದೂರು ನಿರ್ವಹಣಾ ವ್ಯವಸ್ಥೆಯನ್ನು ಅವಲೋಕಿಸಿದರು. ಮಹಿಳಾ ದೌರ್ಜನ್ಯ ಪ್ರಕರಣಗಳಲ್ಲಿ ತನಿಖೆಯನ್ನು ವಿಳಂಬ ಮಾಡದೇ, ಕಾನೂನು ಪ್ರಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರಲ್ಲಿ ಮಹಿಳಾ ಸಹಾಯವಾಣಿ, ಕಾನೂನು ನೆರವು ಹಾಗೂ ಮಹಿಳಾ ಆಯೋಗದ ಸೇವೆಗಳ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು. ಮಹಿಳೆಯರ ಸುರಕ್ಷತೆ ಮತ್ತು ಗೌರವ ಕಾಪಾಡುವಲ್ಲಿ ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕೆಂದು ಅವರು ತಿಳಿಸಿದರು. ಈ ಸಂದರ್ಭದಲ್ಲಿ ಮಹಿಳಾ ಪೊಲೀಸ್ ಠಾಣೆಯ ಇನಸ್ಪೆಕ್ಟರ್ ರಾಮನಗೌಡ ಸಂಕನಾಳ, ಪೊಲೀಸ್ ಇಲಾಖೆ ಅಧಿಕಾರಿಗಳು, ಮಹಿಳಾ ಪೊಲೀಸ್ ಠಾಣೆಯ ಸಿಬ್ಬಂದಿ ಹಾಗೂ ಇತರ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



# ಜಿಲ್ಲಾ ಆಸ್ಪತ್ರೆಯ ಕಾರ್ಯವೈಖರಿ ಮೆಚ್ಚಿದ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಆಸ್ಪತ್ರೆಗಳಿಗೆ ಅಗತ್ಯ ಸಿಬ್ಬಂದಿ, ಸೌಲಭ್ಯಗಳನ್ನು ಪೂರೈಸಲು ಸರ್ಕಾರಕ್ಕೆ ಪತ್ರ : ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ

**ಬೆಳಗಾವಿ ವಾರ್ತೆ ಧಾರವಾಡ:** ಪ್ರತಿ ಜಿಲ್ಲೆಗೆ ಭೇಟಿ ನೀಡಿದಾಗ ಸಾರ್ವಜನಿಕರು, ಸಿಬ್ಬಂದಿ ಗಳು ಜಿಲ್ಲಾ ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಬಗ್ಗೆ ಅನೇಕ ದೂರುಗಳನ್ನು ನೀಡುತ್ತಾರೆ. ಆದರೆ ಧಾರವಾಡ ಜಿಲ್ಲಾ ಆಸ್ಪತ್ರೆಗೆ ಇಂದು ಭೇಟಿ ನೀಡಿದಾಗ ಆಸ್ಪತ್ರೆ ಬಂದಿರುವ ಗ್ರಾಮೀಣ ಭಾಗದ ಅನೇಕ ಮಹಿಳಾ, ಪುರುಷ ರೋಗಿಗಳು ಮತ್ತು ಸಂಬಂ ಧಿಕರು ಜಿಲ್ಲಾ ಆಸ್ಪತ್ರೆಯ ಬಗ್ಗೆ, ಜಿಲ್ಲಾ ಶಸ್ತ್ರಚಿಕಿ ತ್ಸಕರ, ವೈದ್ಯಾಧಿಕಾರಿಗಳ ಬಗ್ಗೆ ಉತ್ತಮ ವಾದ ಅಭಿಪ್ರಾಯವನ್ನು ನೀಡಿದ್ದಾರೆ. ಇದು ಅತ್ಯಂತ ಸಂತೋಷದ ಸಂಗತಿ ಯಾಗಿದ ಎಂದು ಧಾರವಾಡ ಜಿಲ್ಲಾ ಆಸ್ಪತ್ರೆಯ ಬಗ್ಗೆ ತಮ್ಮ ಮೆಚ್ಚುಗೆಯನ್ನು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗ ಲಕ್ಷ್ಮಿ ಚೌಧರಿ ಅವರು ವ್ಯಕ್ತಪಡಿಸಿದರು.

ಅವರು ಇಂದು ಬೆಳಿಗ್ಗೆ ಧಾರವಾಡ ಜಿಲ್ಲಾ ಆಸ್ಪತ್ರೆಗೆ ಹಾಗೂ ಜಿಲ್ಲಾ ಆಸ್ಪತ್ರೆಯ ತಾಯಿ ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ, ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದರು.

ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು, ಜಿಲ್ಲಾ ಆಸ್ಪತ್ರೆಗೆ ಚಿಕಿತ್ಸೆಗಾಗಿ ಆಗಮಿಸಿದ್ದ ಸಾರ್ವಜನಿಕರನ್ನು ಮಾತನಾಡಿಸಿ ಆಸ್ಪತ್ರೆಯಲ್ಲಿ ವೈದ್ಯಕೀಯ ಸಿಬ್ಬಂದಿಗಳ ಸ್ಪಂಧನೆ, ಚಿಕಿತ್ಸೆ, ಉಚಿತ ಔಷಧಿ ವಿತರಣೆ ಕುರಿತು ಮಾಹಿತಿ ಪಡೆದುಕೊಂಡರು. ಆಸ್ಪತ್ರೆಯ ಹೆರಿಗೆ ವಿಭಾಗಕ್ಕೆ ಭೇಟಿ ನೀಡಿ, ಬಾಣಂತಿಯರನ್ನು ಮಾತನಾಡಿಸಿ, ಸೌಲಭ್ಯ ಹಾಗೂ ವೈದ್ಯರ ಚಿಕಿತ್ಸೆ ಸ್ಪಂದನೆ ಕುರಿತು ಅಭಿಪ್ರಾಯ ಸಂಗ್ರಹಿಸಿರುವದಾಗಿ ತಿಳಿಸಿದರು.

ತಾಯಿ ಮತ್ತು ಮಗುವಿನ ಜೀವವನ್ನು ಉಳಿಸುವುದು ಮಹತ್ವದ ಕಾರ್ಯ. ಅದನ್ನು ಧಾರವಾಡ ಜಿಲ್ಲಾ ಆಸ್ಪತ್ರೆಯ ವೈದ್ಯರು ಅತ್ಯಂತ ಕಳಕಳಿಯಿಂದ ಮಾಡುತ್ತಿದ್ದಾರೆ. ಇದು ಶ್ಲಾಘನೀಯ ಕೆಲಸ, ಒಂದು ತಿಂಗಳಲ್ಲಿ 550 ಸುರಕ್ಷಿತ ಹೆರಿಗೆ ಮಾಡಿಸಿದ್ದಾರೆ. ಅದರಲ್ಲಿ 82 ಜನ ತುಂಬಾ ಸೀರಿಯಸ್ ಆಗಿರುವ ತಾಯಿ ಮತ್ತು ಮಗುವಿನ ಜೀವವನ್ನು ಉಳಿಸಿದ್ದಾರೆ. ಇದು ತುಂಬಾ ಹೆಮ್ಮೆಯನ್ನಿಸುತ್ತದೆ. ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರು ಹೇಳಿದರು.



ಸಖಿ ಒನ್ ಕೇಂದ್ರಕ್ಕೆ ಭೇಟಿ ನೀಡಿ, ದಾಖಲಾತಿಗಳನ್ನು ಪರಿಶೀಲಿಸಿ, ಸಾರ್ವಜನಿಕರ ಸ್ಪಂದನೆ ಹಾಗೂ ಅರಿವು ಮೂಡಿಸುವ ಕುರಿತು ಸಿಬ್ಬಂದಿಗಳೊಂದಿಗೆ ಚರ್ಚಿಸಿ, ಮಾಹಿತಿ ಪಡೆಯಲಾಗಿದೆ ಮುಂದಿನ ದಿನಗಳಲ್ಲಿ ಸಾರ್ವಜನಿಕರಿಗೆ ಸಖಿ ಒನ್ ಕೇಂದ್ರದ ಕುರಿತು ಅರಿವು ಕಾರ್ಯಕ್ರಮಗಳನ್ನು ಆಯೋಜಿಸಲು ಕ್ರಮವಹಿಸಲಾಗು ವುದೆಂದು ಅವರು ತಿಳಿಸಿದರು.

ಕಳೆದ 3 ವರ್ಷಗಳಲ್ಲಿ 18 ವರ್ಷ ಕಡಿಮೆ ಇರುವ ಮಕ್ಕಳ 83 ಪೋಕ್ಸೋ ಕೇಸ್ ಪ್ರಕರಣಗಳು ದಾಖಲಾಗಿವೆ. ಸಖಿ ಒನ್ ಸ್ಟಾಪ್ ಕೇಂದ್ರದಿಂದ ದಾಖಲೆಗಳನ್ನು ತೆಗೆದುಕೊಂಡಿದ್ದೇನೆ. ಇದರಲ್ಲಿ 12 ಜನ ಮಕ್ಕಳಿಗೆ ಬಾಲ್ಯವಿವಾಹ ಆಗಿ ಗರ್ಭಿಣಿ ಆಗಿದ್ದಾರೆ, 33 ಜನ ಅಪ್ರಾಪ್ತ ಹೆಣ್ಣು ಮಕ್ಕಳು ಅತ್ಯಾಚಾರಕ್ಕೆ ಒಳಪಟ್ಟು ತಾಯಿ ಆಗಿದ್ದಾರೆ, ಮತ್ತು 22 ಜನ ಮಕ್ಕಳು ಬೇಡ ಎಂದು ಸ್ವ-ಇಚ್ಛೆಯಿಂದ ಗರ್ಭಪಾತಕ್ಕೆ ಒಳಪಟ್ಟಿದ್ದಾರೆ. ಇಂತಹ ಅಮಾನವಿಯ ಪ್ರಕರಣಗಳು ನಡೆಯುತ್ತಿರುವುದು ದೊಡ್ಡ ದುರಂತ ಮತ್ತು ಆಂತಕ ಪಡುವ ಬೆಳವಣಿಗೆ ಆಗಿದೆ ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯದಲ್ಲಿ ಡಿ.ಗ್ರೂಪ್, ನರ್ಸ್, ಡಾಕ್ಟರ್ಸ್ ಕೊರತೆ ಇದೆ ಮಾಹಿತಿ ಪಡೆದುಕೊಂಡಿದ್ದೇನೆ. ಮತ್ತು MRI ಸ್ಕ್ಯಾನಿಂಗ್ ಕೊರತೆ ಇದೆ ಇದನ್ನು ರಾಜ್ಯ ಸರ್ಕಾರದ ಗಮನಕ್ಕೆ ತರುತ್ತೇನೆ ಎಂದು ಅವರು ಹೇಳಿದರು.

ಜಿಲ್ಲಾ ಆಸ್ಪತ್ರೆಯ ಭೇಟಿ ಸಂದರ್ಭದಲ್ಲಿ ಅನೇಕ ಸಾರ್ವಜನಿಕರು ತಮ್ಮ ಮನವಿಗಳನ್ನು ಸಲ್ಲಿಸಿದ್ದು, ಈ ಕುರಿತು ಪರಿಶೀಲಿಸಿ ಸಂಬಂಧ ಪಟ್ಟ ಇಲಾಖೆಗಳಿಗೆ ಪತ್ರ ಬರೆದು ಕ್ರಮ ವಹಿಸಲಾಗುವುದೆಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಡಾ. ಎಚ್.ಎಚ್.ಕುಕನೂರ, ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಎಸ್.ಎಂ.ಹೊನಕೇರಿ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಅಧಿಕಾರಿಗಳು, ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಗಳು, ವೈದ್ಯಕೀಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ಯೋಜನೆ ಕಾರ್ಯಾರಂಭಕ್ಕೆ ಆಗ್ರಹ

**ಬೆಳಗಾವಿ ವಾರ್ತೆ ನವಲಗುಂದ :** ಮಲಪ್ರಭಾ ಮಹದಾಯಿ ಕಳಸಾ ಬಂಡೂರಿ ಕುಡಿಯುವ ನೀರಿನ ಯೋಜನೆ ಕುರಿತು ತಕ್ಷಣವೇ ಸರ್ವಪಕ್ಷ ಸಭೆಕರೆದು ಪ್ರಧಾನಮಂತ್ರಿಗಳ ಬಳಿ ನಿಯೋಗ ಕರೆದೋಯ್ದು ಕೂಡಲೇ ಸಮಸ್ಯೆ ಪರಿಹರಿಸಿ ಯೊಜನೆ ಕಾರ್ಯಾರಂಭ ಮಾಡುವಂತೆ ಆಗ್ರಹಿಸಿ ಮಹದಾಯಿ ಕಳಸಾ ಬಂಡೂರಿ ಹೋರಾಟಗಾರರು ತಹಶೀಲ್ದಾರ ಕಚೇರಿ ಶಿರೇಸ್ತದಾರ ಗಣೇಶ ಚಳ್ಳಕೆರೆ ಮೂಲಕ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಹೋರಾಟಗಾರ ಸುಭಾಸಚಂದ್ರಗೌಡ ಪಾಟೀಲ ಮಾತನಾಡಿ ಮಲಪ್ರಭೆ ಮಹದಾಯಿ ಕಳಸಾ ಬಂಡೂರಿ ಕುಡಿಯುವ ನೀರಿನ ಯೋಜನೆ ಕುರಿತು ಜಲಸಂಪನ್ಮೂಲ ಸಚಿವರು ಹಾಗೂ ಉಪ ಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ ಅವರು ಎಂಪಿ ಗಳ ಸಭೆ ಕರೆದು ಪ್ರಧಾನಮಂತ್ರಿಗಳ ಬಳಿಗೆ ಹೋಗುವದಾಗಿ ಸಭೆ ಮಾಡಿದ್ದಾರೆ ಆದರೆ ಇದುವರೆಗೂ ಯಾವುದೇ ಕಾರ್ಯವಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು



ಉತ್ತರ ಕರ್ನಾಟಕದಲ್ಲಿ ಮುಂಗಾರು ಪ್ರಾರಂಭವಾಗಿದ್ದು ಇಂಥ ಸಂದರ್ಭದಲ್ಲಿ ಡಿಸ್ಕೆಲ್ ಪೆಟ್ರೋಲ್ ರೈತರಿಗೆ ಹಾಗೂ ರೈತರಿಗೆ ಡಿಜೈಲ್ ಪೆಟ್ರೋಲ್ ಕ್ಯಾನಗಳಿಗೆ ಕೊಡುವುದಿಲ್ಲ. ಮೊದಲಿನಂತೆ ಕ್ಯಾನ ಮೂಲಕ ಪೆಟ್ರೋಲ್ ಡೀಸೆಲ್ ರೈತರಿಗೆ ಪೂರೈಸಬೇಕು.

ರೈತರಿಗೆ ಎಫ್ ಐ ಡಿ ಮೂಲಕ ಗೊಬ್ಬರ ವಿತರಣೆ ನಿಲ್ಲಿಸಿ ಎಲ್ಲಾ ಅಂಗಡಿಗಳಲ್ಲಿ ಮತ್ತು ಸೊಸೈಟಿಗಳ ಮೂಲಕ ವಿತರಣೆಯಾಗಬೇಕು ಗೊಬ್ಬರಗಳ ರೈತರಿಗೆ ಕೋರತೆಯಾಗಂತ ನೋಡಿಕೊಳ್ಳಬೇಕು. ರೈತ ಸಂಪರ್ಕ ಕೇಂದ್ರಗಳಲ್ಲಿ ಮುಂಗಾರು ಹಂಗಾಮಿನ ಹೆಸರು ಸೋಯಾಬೀನ್ ಗೋವಿನಜೋಳ ಇತರ ಬೀಜಗಳನ್ನು ತಕ್ಷಣವೇ ವಿತರಣೆಯಾಗಬೇಕು.

ಬೆಳೆ ವಿಮೆ ವಿತರಣೆಯಲ್ಲಿ ಅನೇಕ ರೈತರಿಗೆ ವಿಮೆ ಸಿಗದಾಗಿದೆ ಇನ್ನೂ ಕಳೆದ ವರ್ಷಸತತವಾಗಿ ಮಳೆ ಸುರಿದಿದ್ದರಿಂದ ಗೋವಿನ ಜೋಳ ಬೆಳೆ ಹಾನಿಯಾಗಿ ರೈತರಿಗೆ ಬೆಳೆವಿಮೆ ಬಂದಿರುವುದಿಲ್ಲ ಎಲ್ಲ ರೈತರಿಗೂ ಬೆಳೆ ವಿಮಾ ದೊರಕಬೇಕು ಹಾಗೂ ಹೆಸರು ಪಿಕಿನಲ್ಲಿಯೂ ಬೆಳೆ ವಿಮ್ ವ್ಯತ್ಯಾಸವಾಗಿದ್ದು ತಕ್ಷಣವೇ ಸರ್ಕಾರ ಮತ್ತು ವೀಮಾ ಕಂಪನಿಯವರಿಗೆ ಪರಾಮರ್ಶಿಸಿ ಎಲ್ಲ ರೈತರಿಗೂ ಬೆಳೆಯಮ ಕೊಡಬೇಕು ಹಾಗೂ ಬಾಕಿ ಉಳಿದ ರೈತರಿಗೆ ಬೆಳೆ ವಿಮಾ ಪರಿಹಾರ ವಿತರಣೆಯಾಗಬೇಕು

ಪಟ್ಟಣದಲ್ಲಿ ಎಪಿಎಂಸಿ ಉಪ ಮಾರುಕಟ್ಟೆ ಇದ್ದು ನವಲಗುಂದಕ್ಕೆ ಪ್ರತ್ಯೇಕ ಎಪಿಎಂಸಿ ಮಾರುಕಟ್ಟೆಯಾಗಬೇಕು ಅಲ್ಲದೇ ನವಲಗುಂದಕ್ಕೆ ಅಗ್ನಿಶಾಮಕ ಅತಿ ಅವಶ್ಯಕಯಿದೆ ಹಾಗೂ ನವಲಗುಂದಕ್ಕೆ ತಕ್ಷಣವೇ ರೈತ ಸಂಪರ್ಕ ಕೇಂದ್ರವನ್ನು ತೆರೆಯಬೇಕು ಎಂದು ಅವರು ಒತ್ತಾಯಿಸಿದರು.

ಹೋರಾಟ ಸಮಿತಿ ಅಧ್ಯಕ್ಷ ಯಲ್ಲಪ್ಪ ದಾಡಿಭಾವಿ, ರವಿ ತೋಟದ, ಅಲ್ಲಾಬಕ್ಷ ಹಂಚಿನಾಳ, ನಿಂಗಪ್ಪ ತೋಟದ, ಯಲ್ಲಪ್ಪ ತಡಸಿ, ಸಂಗಪ್ಪ ನೀಡವಣಿ, ಗೋವಿಂದರಡ್ಡಿ ಮೊರಬದ, ಪಕ್ಕೀರಗೌಡ ಬಸನಗೌಡ್ರ, ಉಳಿವೆಪ್ಪ ಉಳ್ಳಾಗಡ್ಡಿ, ಹುಸೇನಷಾ ಮಕಾಂದಾರ, ಇಮಾಮಸಾಬ ಚಾಹುಸೇನ್, ಸಿದ್ದಲಿಂಗಪ್ಪ ಹಳ್ಳದ ಇತರರು ಇದ್ದರು.

# ಪ.ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಎಸ್.ಎಸ್.ಎಲ್.ಸಿ ಹಾಗೂ ಮೆಟ್ರಿಕ್ ನಂತರದ ವಿವಿಧ ಕೋರ್ಸಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡಲು ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು http://swdservices.karnataka.gov.in/ PrizeMoneyClientApp/register ಲಿಂಕ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಜ್ಞವೈದ್ಯ, ವೈದ್ಯಾಧಿಕಾರಿಗಳ ನೇಮಕಕ್ಕೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಯ ತಾಲೂಕಾ ಆಸ್ಪತ್ರೆಗಳು, ತಜ್ಞ ವೈದ್ಯಕರು & ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರು & ಹಿರಿಯ ವೈದ್ಯಾಧಿಕಾರಿಗಳ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುವ ಹುದ್ದೆಗೆ ಗುತ್ತಿದೆ ಆಧಾರದ ಮೇಲೆ ನೇಮಕಾತಿಗಾಗಿ ಪ್ರತಿ ದಿನ ನೇರ ಸಂದರ್ಶನಕ್ಕೆ ಹಾಜರಾಗಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೋವಿ ವಡ್ಡರ್ ಯುವ ವೇದಿಕೆಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

## ಬಡತನ ದೂರಾಗಲು ಮಕ್ಕಳು ಶಿಕ್ಷಣದತ್ತ ಮುಖ ಮಾಡಬೇಕು: ಹಣಮಂತ ಭೈರವಾಡಗಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** "ನಮ್ಮ ಸಮಾಜದ ಕಟ್ಟಕಡೆಯ ವ್ಯಕ್ತಿಯೂ ಬಡತನದಲ್ಲಿ ಜೀವನ ನಡೆಸುತ್ತಿದ್ದು, ಈ ಪರಿಸ್ಥಿತಿ ಬದಲಾಗಬೇಕಾದರೆ ಇಂದಿನ ಮಕ್ಕಳು ಕಡ್ಡಾಯವಾಗಿ ಶಿಕ್ಷಣದತ್ತ ಮುಖ ಮಾಡಬೇಕು. ವಿದ್ಯಾವಂತರಾಗಿ ಉನ್ನತ ಸ್ಥಾನಕ್ಕೇರುವ ಮೂಲಕ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಅಖಿಲ ಕರ್ನಾಟಕ ಬೋವಿ ವಡ್ಡರ್ ಯುವ ವೇದಿಕೆಯ ತಾಲೂಕಾ ಉಪಾಧ್ಯಕ್ಷ ಹಣಮಂತ ಭೈರವಾಡಗಿ ಅವರು ಕರೆ ನೀಡಿದರು.

ತಾಲೂಕಿನ ಢವಳಗಿ ಗ್ರಾಮದ ಶ್ರೀ ಲಕ್ಷ್ಮಿ ದೇವಿ ಜಾತ್ರಾ ಮಹೋತ್ಸವದ ಅಂಗವಾಗಿ, ಅಖಿಲ ಕರ್ನಾಟಕ ಬೋವಿ ವಡ್ಡರ್ ಯುವ ವೇದಿಕೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಡ್ಡರ್ ಸಮಾಜದ 2025-2026ನೇ ಸಾಲಿನ ಎಸ್ ಎಸ್ಎಲ್ ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಪ್ರತಿಭಾ ಪುರಸ್ಕಾರ ಸನ್ಮಾನ ಸಮಾರಂಭ'ದಲ್ಲಿ ಅವರು ಮಾತನಾಡುತ್ತಿದ್ದರು.

**ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವ:** ಸಮಾರಂಭದಲ್ಲಿ ಸಮಾಜದ ಸಾಧಕ ವಿದ್ಯಾರ್ಥಿಗಳಾದ ಅರುಣ್ ಡವಳಗಿ,ಯಲ್ಲಮ್ಮ ಭೈರವಾಡಗಿ, ಬಸವರಾಜ್ ವಡ್ಡರ್, ಲಕ್ಷ್ಮಿ ಡವಳಗಿ, ಸಹನಾ ವಡ್ಡರ್, ರಾಧಿಕಾ ಗೌಂಡಿ, ಚಿನ್ಮಯ್ ದೊಡಮನಿ, ಹರ್ಷಾ ಪಾತ್ರೊಟ ಹಾಗೂ ಸಪ್ನಾ ಮ್ಯಾಗೇರಿ ಅವರನ್ನು ಬೋವಿ ವಡ್ಡರ್ ಯುವ ವೇದಿಕೆ ಹಾಗೂ ಸಮಾಜದ ಪ್ರಮುಖರ ವತಿಯಿಂದ ಅತ್ಯಂತ ಗೌರವಪೂರ್ವಕವಾಗಿ ಸನ್ಮಾನಿಸಿ, ಪ್ರೋತ್ಸಾಹಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಪ್ರಮುಖ ಮುಖಂಡರುಗಳಾದ ರವಿ ಡವಳಗಿ, ಬಾಬುರಾವ್ ವಾಡಿ, ನಾಗಪ್ಪ ಡವಳಗಿ, ಗಿರೀಶ್ ಭೈರವಾಡಗಿ, ಸೋಮಣ್ಣ ಡವಳಗಿ, ಜಗದೀಶ್ ದೊಡಮನಿ, ರಾಮು ವಡ್ಡರ್, ಭೀಮಣ್ಣ ಡವಳಗಿ, ಶಿವರಾಜ್ ಭೈರವಾಡಗಿ, ನಾಗರಾಜ್ ಲಿಂಗಸೂರ್,ಹಣಮಂತ ಬೆಲಗಲ್ಲ, ಭೀಮಶಂಕರ್ ದೊಡಮನಿ, ಬಸವರಾಜ್ ಹೂವಿನಹಳ್ಳಿ, ಶ್ರೀಶೈಲ್ ಡವಳಗಿ, ರಾಜು ಭೈರವಾಡಗಿ, ಮುದುಕಪ್ಪ ಡವಳಗಿ, ಪರಶುರಾಮ್ ಭೈರವಾಡಗಿ, ದ್ಯಾಮಣ್ಣ ಡವಳಗಿ, ಅಶೋಕ್ ಡವಳಗಿ, ಬಾಬುರಾವ್ ಭೈರವಾಡಗಿ, ಗಣೇಶ್ ಕುಮಟಗಿ ಸೇರಿದಂತೆ ಸಮಾಜದ ನೂರಾರು ಮಹಿಳೆಯರು ಹಾಗೂ ಯುವಕರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಶಿಕ್ಷಣವೆಂಬ ಅಸ್ತ್ರ ನಿಮ್ಮದಾಗಲಿ: ಡಾ.ಕೊಕ್ಕನವರ



**ಬೆಳಗಾವಿ ವಾರ್ತೆ ತಾಳಿಕೋಟೆ:** ಪಟ್ಟಣದ ವೀರಶೈವ ವಿದ್ಯಾವರ್ಧಕ ಸಂಘದ ಶ್ರೀ ಖಾಸ್ಗತೇಶ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದಲ್ಲಿ ಮಂಗಳವಾರರಂದು 2025-26ನೇ ಸಾಲಿನ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳು, ಎನ್.ಎಸ್.ಎಸ್. ಎನ್.ಸಿ.ಸಿ, ವಾಯ್.ಆರ್.ಸಿ. ಇ.ಎಲ್.ಸಿ. ಮತ್ತು ಸೌಟ್ಸ್ & ಗೈಡ್ಸ್ ಹಾಗೂ ವಿವಿಧ ಚಟುವಟಿಕೆಗಳ ಮುಕ್ತಾಯ ಸಮಾರಂಭ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭವು ಜರುಗಿತು.

ಕಾಲೇಜಿನ ವಿರಕ್ತಶ್ರೀ ಸಭಾಭವನದಲ್ಲಿ ನಡೆದ ಸಮಾರಂಭದಲ್ಲಿ ಸಂಪನ್ಮೂಲ ಅತಿಥಿಗಳಾಗಿ ಆಗಮಿಸಿದ ಜಮಖಂಡಿಯ ಸಾಹಿತಿಗಳು ಮತ್ತು ಸಂಯೋಜಕರು ಕನ್ನಡ ಸ್ನಾತಕೋತ್ತರ ಕೇಂದ್ರ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಡಾ. ಯಶವಂತ ಕೊಕ್ಕನವರ ಅವರು ಮಾತನಾಡಿ ಸಮಾಜದಲ್ಲಿ ವ್ಯಕ್ತಿಗೆ ಸ್ಥಾನಮಾನಗಳು ದೊರೆಯ ಬೇಕಾದಲ್ಲಿ ಶಿಕ್ಷಣವೆಂಬ ಅಸ್ತ್ರ ನಮ್ಮದಾಗ ಬೇಕು ಆಗ ನಮ್ಮ ಗುರಿ ತಲುಪಲು ಸಾಧ್ಯವಾಗಲಿದೆ ಅಚಲವಾದ ನಂಬಿಕೆ ಮತ್ತು ಗುರಿಯೊಂದಿಗೆ ಮುನ್ನಡೆದು ಸಾಧನೆಯ ಸಾಧಕರಾಗಿ ಇದೇ ಶಾಲೆಗೆ ಅತಿಥಿಗಳಾಗ ಆಗಮಿಸಿ ಕಾಲೇಜಿನ ಹಿರಿಮೆಯನ್ನು ಬೆಳಗಿಸಿರಿ ಎಂದರು.

ಪ್ರಾಚಾರ್ಯರಾದ ಡಾ. ಡಿ.ಬಿ ಮೂಗಡ್ಲಿಮಠ ಅವರು ಮಾತನಾಡಿ ವಿದ್ಯಾರ್ಥಿಗಳು ಗುರಿ, ಸಮಯಪ್ರಜ್ಞೆ, ದೃಡಸಂಕಲ್ಪದಿಂದ ಬದುಕು ಕಟ್ಟಿಕೊಳ್ಳಬೇಕು ಉನ್ನತ ಶಿಕ್ಷಣದಿಂದ ಉದ್ಯೋಗ ಪಡೆದು ಜೀವನ ರೂಪಿಸಿಕೊಳ್ಳಬೇಕೆಂದರು.

ಕಾರ್ಯಕ್ರಮ ಉದ್ಘಾಟಿಸಿದ ವೀರಶೈವ ವಿದ್ಯಾವರ್ಧಕ ಸಂಘದ ಹಾಗೂ ಮಹಾವಿದ್ಯಾಲಯದ ಅಧ್ಯಕ್ಷರಾದ ವಿ. ಸಿ. ಹಿರೇಮಠ ಅವರು ಮಾತನಾಡಿ ಮಕ್ಕಳು ತಮ್ಮ ಉಜ್ವಲ ಭವಿಷ್ಯಕ್ಕೆ ಸದಾ ನಿರತರಾಗಬೇಕು. ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲು ನಮ್ಮ ಮಹಾವಿದ್ಯಾಲಯ ಕಳೆದ 49 ವರ್ಷಗಳಿಂದ ಶ್ರಮಿಸುತಿದೆ. ನಮ್ಮ ಮಹಾವಿದ್ಯಾಲಯಕ್ಕೆ 50 ವರ್ಷಗಳು ತುಂಬುವ ಸಂಭ್ರಮಾಚರಣೆಯಲ್ಲಿ ಇದ್ದೆವೆ. ಸುವರ್ಣ ಸಂಭ್ರಮದಲ್ಲಿ ನಾವು ನಮ್ಮ ಸಂಸ್ಥೆಯನ್ನು ಮತ್ತಷ್ಟು ಮೆರಗು ನೀಡಲು ಪ್ರಯತ್ನಿಸುತ್ತೆವೆ ಎಂದರು.

ಈ ಸಮಯದಲ್ಲಿ ವೀರಶೈವ ವಿದ್ಯಾವರ್ಧಕ ಸಂಘ, ಕಾರ್ಯದರ್ಶಿಗಳು ಎಮ್.ಎಸ್. ಸರಶೆಟ್ಟಿ, ಉಪಾಧ್ಯಕ್ಷ ಕೆ.ಎಸ್. ಮುರಾಳ, ಸಂಘದ ನಿರ್ದೆಶಕರು ಹಾಗೂ ಸಂಚಾಲಕರಾದ ಡಾ. ಅಶೋಕ ಆರ್ ರಾಠೋಡ ಹಾಗೂ ವಿದ್ಯಾರ್ಥಿ ಪ್ರತಿನಿಧಿಯಾದ ಕುಮಾರಿ ವಿದ್ಯಾಶ್ರೀ ಅಗಸರ ಹಾಗೂ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿ-ವಿದ್ಯಾರ್ಥಿನಿರು ಉಪಸ್ಥಿತರಿದ್ದರು.

ಕುಮಾರಿ ಮಮತಾಜ ನಾಯ್ಕೋಡಿ ಪ್ರಾರ್ಥಿಸಿದರು. ಡಾ. ಸುಜಾತಾ ಚಲವಾದಿ ಪರಿಚಯಿಸಿದರು. ಬಹುಮಾನ ವಿತರಣೆಯನ್ನು ಕೆ. ಬಿ. ದೇಸಾಯಿ ನಡೆಸಿಕೊಟ್ಟರು. ಡಾ. ದೀಪಾ ಮಾಳಗೆ, ಶ್ರೀಮತಿ ಸಂಗೀತಾ ಕೊಡೆಕಲ್ಲಮಠ ನಿರೂಪಿಸಿದರು. ಶ್ರೀಮತಿ ಲಲಿತಾ ಗೌಡರ ವಂದಿಸಿದರು.

## ಜಾಕ್‌ವೆಲ್ ನಿರಂತರ ವಿದ್ಯುತ್ ಮಾರ್ಗದಲ್ಲಿ ಗೋಲ್‌ಮಾಲ್: ಹೆಸ್ಕಾಂ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಆಗ್ರಹ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲ್ಲೂಕಿನ ನಾಲತವಾಡ ಪಟ್ಟಣಕ್ಕೆ ಕುಡಿಯುವ ನೀರು ಒದಗಿಸುವ ಕೃಷ್ಣಾ ನದಿ ತೀರದ ಜಾಕ್‌ವೆಲ್‌ಗೆ ಕಲ್ಪಿಸಲಾಗಿರುವ ನಿರಂತರ ವಿದ್ಯುತ್ ಸರಬರಾಜು ವ್ಯವಸ್ಥೆಯಲ್ಲಿ ಭಾರಿ ಗೋಲ್‌ಮಾಲ್ ನಡೆದಿದೆ. ಹಣ ಪಡೆದು ಅಕ್ರಮವಾಗಿ ಇತರರಿಗೆ ಸಂಪರ್ಕ ಕಲ್ಪಿಸಿರುವ ಹೆಸ್ಕಾಂ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ನವ ಕರ್ನಾಟಕ ರಾಜ್ಯ ಭ್ರಷ್ಟಾಚಾರ ನಿರ್ಮೂಲನಾ ವೇದಿಕೆಯ ಪದಾಧಿಕಾರಿಗಳು ಜಿಲ್ಲಾಧಿಕಾರಿಯವರಿಗೆ ಬರೆದ ಮನವಿಯನ್ನು ಉಪ ತಹಶೀಲ್ದಾರ್ ಮಾವಿನಮಟ್ಟಿ (ದೊರೆ) ಮೂಲಕ ಮನವಿ ಸಲ್ಲಿಸಿದರು.

ಪಟ್ಟಣದ ಜನತೆಗೆ ಕುಡಿಯುವ ನೀರಿನ ತೊಂದರೆಯಾಗಬಾರದು ಎನ್ನುವ ಉದ್ದೇಶದಿಂದ ಸರ್ಕಾರ ಈ ಪ್ರತ್ಯೇಕ ನಿರಂತರ ವಿದ್ಯುತ್ ಸರಬರಾಜು ಮಾರ್ಗವನ್ನು ನಿರ್ಮಿಸಿದೆ. ಕಳೆದ 20 ವರ್ಷಗಳಿಂದ ಸ್ವತಃ ಪಟ್ಟಣ ಪಂಚಾಯಿತಿಯೇ ಇದರ ವಿದ್ಯುತ್ ಬಿಲ್ ಪಾವತಿಸುತ್ತಾ ಬಂದಿದೆ. ಆದರೆ, ಹೆಸ್ಕಾಂ ಅಧಿಕಾರಿಗಳು ನಿಯಮ ಗಾಳಿಗೆ ತೂರಿ, ಈ ಮಾರ್ಗದಲ್ಲಿ ಬರುವ ನಾಲ್ಕಾರು ಹಳ್ಳಿಗಳಿಗೆ ಹಾಗೂ ಕೆಲ ರೈತರಿಗೆ ಹಣದ ಆಮಿಷಕ್ಕೆ ಒಳಗಾಗಿ ಅಕ್ರಮವಾಗಿ ವಿದ್ಯುತ್ ಸಂಪರ್ಕ ಒದಗಿಸಿದ್ದಾರೆ ಎಂದು ವೇದಿಕೆ ಪದಾಧಿಕಾರಿಗಳು ಆರೋಪಿಸಿದ್ದಾರೆ.

**ಕೋಟಿಗಟ್ಟಲೆ ಹಣದ ದಂಧೆ:** ಬೇಸಿಗೆಯ ತೀವ್ರ ಸಂದರ್ಭದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಅಭಾವ ಉಂಟಾಗಬಾರದು ಎಂದು ಸರ್ಕಾರ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಆದರೆ, ಇದನ್ನು ಕಿಂಚಿತ್ತೂ ಲೆಕ್ಕಿಸದ ಹೆಸ್ಕಾಂ ಅಧಿಕಾರಿಗಳು, ಉದ್ಯಮಿಗಳು ಹಾಗೂ ಪ್ರಭಾವಿಗಳಿಂದ ಕೋಟಿಗಟ್ಟಲೆ



ಹಣ ಪಡೆದು ಅಕ್ರಮ ಸಂಪರ್ಕ ಹಂಚಿದ್ದಾರೆ. ಇದರಿಂದಾಗಿ ನೀರಿನ ಘಟಕಕ್ಕೆ ಸಮರ್ಪಕ ವಿದ್ಯುತ್ ಸಿಗದೆ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಆತಂಕ ಎದುರಾಗಿದೆ. ಈ ಅಕ್ರಮ ಎಸಗಿದ ಅಧಿಕಾರಿಗಳ ಮೇಲೆ ತಕ್ಷಣವೇ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಅಧ್ಯಕ್ಷ ಎಂ.ಎನ್. ಕುಳಗೇರಿ, ಮುಖಂಡರಾದ ಎಚ್.ಬಿ. ಮಾದರ, ಮಹಾಂತೇಶ ಸ್ಥಾವರಮಠ, ಭೀಮಣ್ಣ ಲೊಟಗೇರಿ, ಮೈಬು, ಸಂಗಪ್ಪ ಚಲವಾದಿ ಸೇರಿದಂತೆ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಹಡಪದ ಸಮಾಜವನ್ನು ಪ್ರೋತ್ಸಾಹಿಸಿ ಬೆಳೆಸಲು ನಿರುಪಾದಿ ಕೇಸರಹಟ್ಟಿ ಮನವಿ

**ಬೆಳಗಾವಿ ವಾರ್ತೆ ಗಂಗಾವತಿ:** ನಗರದಲ್ಲಿ ಹಡಪದ ಸಮಾಜವನ್ನು ಉದ್ದೇಶಿಸಿ ಸಮಾಜದ ಗಂಗಾವತಿ ತಾಲೂಕು ಅಧ್ಯಕ್ಷ ನಿರುಪಾದಿ ಕೇಸರಟ್ಟಿ ಮಾತನಾಡಿ ನಮ್ಮ ಸಮಾಜ ಅತ್ಯಂತ ಬಡತನದ ವರ್ಗದಾಗಿದ್ದು, ಬಸವಣ್ಣನವರ ಆದೇಶದಂತೆ ಕಾಯಕವೇ ಕೈಲಾಸ ಎಂಬಂತೆ ನಮ್ಮ ಸಮಾಜಕ್ಕೆ ಕಾಯಕವಿಲ್ಲದೆ ಬೇರೆ ದಾರಿ ಇಲ್ಲ ಎಂದರು.

ಮುಂದಿನ ದಿನಮಾನಗಳಲ್ಲಿ ಹಂತ ಹಂತವಾಗಿ ಸಮಾಜದ ಎಲ್ಲಾ ಕಾರ್ಮಿಕ ವರ್ಗಕ್ಕೆ ಸರ್ಕಾರ ನೀಡುವ ಕಾರ್ಮಿಕ ಇಲಾಖೆಯ ಕಾರ್ಡನ್ನು ವಿತರಿಸಲಾಗುವುದು ಎಂದರು.

ಸರ್ಕಾರದಿಂದ ಬರುವ ಹಲವಾರು ಸೌಲಭ್ಯಗಳನ್ನು ಸಮಾಜ ಬಳಸಿಕೊಳ್ಳಬೇಕಾಗಿದೆ ಮತ್ತು ಸರ್ಕಾರದ ಸೌಲಭ್ಯಗಳು ಮತ್ತು ವಿವಿಧ ಯೋಜನೆಗಳ ಬಗ್ಗೆ ಸಮಗ್ರ ಮಾಹಿತಿ ಸಮಾಜಕ್ಕೆ ಒದಗಿಸಬೇಕಿದೆ. ಸರಿಯಾದ ಮಾಹಿತಿ ಗೊತ್ತಿಲ್ಲದ ಕಾರಣ, ಸಮಾಜದ



ಕಾರ್ಮಿಕರಿಗೆ ಆರೋಗ್ಯದ ದೃಷ್ಟಿಯಿಂದ ಆರೋಗ್ಯ ಇಲಾಖೆಯಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು, ನಮ್ಮ ಸಮಾಜದ ವಿದ್ಯಾರ್ಥಿ ವಿದ್ಯಾರ್ಥಿನಿಯರು ಮುಂದಿನ ಶೈಕ್ಷಣಿಕವಾಗಿ ಬೆಳೆಯಲು ಮಕ್ಕಳಿಗೆ ಪ್ರೋತ್ಸಾಹ ಧನ ನೀಡಲಾಗುವುದು ಎಂದರು.

ಜೊತೆಗೆ ಈ ವರ್ಷದ 2025 26 ನೇ ಸಾಲಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ವಿಭಾಗದಲ್ಲಿ ಜಿಲ್ಲಾ ಮತ್ತು ತಾಲೂಕ ಮಟ್ಟದಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರನ್ನು ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಿ ಅವರಿಗೆ ಆತ್ಮಸ್ಥೈರ್ಯವನ್ನು ತುಂಬಲಾಗುವುದು.

ನಮ್ಮ ಹಡಪದ ಸಮಾಜ ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಸದೃಢಗೊಳ್ಳಲು ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಹ ಸರ್ಕಾರದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನವನ್ನು ನಾವೆಲ್ಲರೂ ಸೇರಿ ಮಾಡೋಣ ಎಂದು ಹೇಳಿದರು.

ಈ ವೇಳೆ ಕಾರ್ಮಿಕ ಇಲಾಖೆಯಿಂದ ಕಾರ್ಡುಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಹಡಪದ ಸಮಾಜದ ಯುವ ಮುಖಂಡರಾದ ಮಂಜುನಾಥ ಕನಕಗಿರಿ ಹೆಚ್.ಚಂದ್ರು ಕನಕಗಿರಿ, ಕಾರ್ಯದರ್ಶಿ ಶಿವಣ್ಣ ನೀಲಕ'ವ'ು, ಉಪಾಧ್ಯಕ್ಷ ಭೀಮನಗೌಡ,ಹಡಪದ ಸಮಾಜದ ಯುವ ಘಟಕ ಅಧ್ಯಕ್ಷ ವಿಕ್ರಮ ಪಾಟೀಲ್, ಸಮಾಜದ ಮುಖಂಡರಾದ ಬದ್ರಿ ಹೆಚ್,ಮಹಾಂತೇಶ,ಚಂದ್ರಶೇಖರ, ಶರಣಬಸವ,ವೀರೇಶ,ಯಮನೂರು ಸೇರಿದಂತೆ ಇತರರು ಇದ್ದರು.

## ಬೀದಿ ಬದಿಯ ವ್ಯಾಪಾರಸ್ಥರನ್ನು ಒಕ್ಕಲಿ ಬೀಸುವುದನ್ನು ಖಂಡಿಸಿ : ಪರ್ಯಾಯ ವ್ಯವಸ್ಥೆಗೆ ಆಗ್ರಹಿಸಿ ಪ್ರತಿಭಟನೆ



**ಬೆಳಗಾವಿ ವಾರ್ತೆ ಗಂಗಾವತಿ:** ನಗರದಲ್ಲಿ ಹಲವು ದಶಕಗಳಿಂದ ತಮ್ಮ ಜೀವನ ಉಪಯೋಗಕ್ಕಾಗಿ ಬೀದಿ ವ್ಯಾಪಾರಿಗಳು ಸಣ್ಣಪುಟ್ಟ ವ್ಯಾಪಾರಗಳನ್ನು ಮಾಡುವುದರ ಮೂಲಕ ತಮ್ಮ ಜೀವನ ನಿರ್ವಹಣೆಯನ್ನು ನಡೆಸುತ್ತಿದ್ದರು ಆದರೆ ಇದ್ದಕ್ಕಿದ್ದಂತೆ ನಗರಸಭೆ ಸರ್ಕಾರದ ಆದೇಶದ ಅನ್ವಯ ಬೀದಿ ಬದಿಯ ವ್ಯಾಪಾರಸ್ಥರನ್ನು ಒಕ್ಕಲಿಬ್ಬಿಸುವುದರ ಜೊತೆಗೆ ಅವರ ಬದುಕಿನ ಜೀವನದಲ್ಲಿ ಚೆಲ್ಲಾಟ ಆಡುತ್ತಿರುವುದನ್ನು ಖಂಡಿಸಿ ಹಾಗೂ ಬೀದಿ ವ್ಯಾಪಾರಿಗಳ ಜೀವನೋಪಾಯ ರಕ್ಷಣೆ ಮತ್ತು ನಿಯಂತ್ರಣ ಕಾಯ್ದೆ 2014ರ ಅನ್ವಯ ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿ ಸಿಐಟಿಯು ಎ ಐ ಸಿ ಸಿ ಟಿ ಯು ಕೆ ಡಿ ಎಸ್ ಎಸ್ ಭೀಮವಾದ ಸಂಘಟನೆಗಳು ಮಂಗಳವಾರದಂದು ಶ್ರೀ ಕೃಷ್ಣದೇವರಾಯ ವೃತದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಸಂಘಟನೆಗಳ ಮುಖಂಡರುಗಳಾದ ನಿರುಪಾದಿ ಬೆಣಕಲ್ ಸಿಕೆ ಮರಿಸ್ವಾಮಿ , ವಿಜಯ ದೊರೆರಾಜ ಮತ್ತಿತರರು ಮಾತನಾಡಿ ಗಂಗಾವತಿಯ ನಗರ ಪ್ರದೇಶದಲ್ಲಿ ಸುಮಾರು 1600 ಬೀದಿ ವ್ಯಾಪಾರಸ್ಥರನ್ನು ಹೊಂದಿದ್ದು ತಮ್ಮ ಜೀವನ ಉಪಯೋಗಕ್ಕಾಗಿ ಹಣ್ಣು ತರಕಾರಿ ಗೋಡಂಗಡಿ. ಹಾಗೂ ಸಣ್ಣ ಪುಟ್ಟ ತಳ್ಳುವ ಬಂಡಿಯ ಮೂಲಕ ತಮ್ಮ ಸುಂದರವಾದ ಬದುಕನ್ನು ಕಟ್ಟಿಕೊಂಡಿದ್ದರು ಆದರೆ ಫುಡ್ ಪಾತ್ ತೆರವಿನ ನೆಪದಲ್ಲಿ ನಗರ ಸಭೆಯ ನಾಲ್ಕು ದಿಕ್ಕಿನ ಭಾಗದಲ್ಲಿ ಬೀದಿ ವ್ಯಾಪಾರಸ್ಥರನ್ನು ಒಕ್ಕಲ್ಬುಸುವುದರ ಮೂಲಕ ಅವರ ಬದುಕಿಗೆ ಕೊಡಲಿ ಪೆಟ್ಟನ್ನು ನೀಡಿದೆ.

ಈ ಹಿನ್ನೆಲೆಯಲ್ಲಿ ಶಾಸಕ ಜನಾರ್ದನ್ ರೆಡ್ಡಿ ಅವರು ಬಿಡಿ ವ್ಯಾಪಾರಸ್ಥರಿಗೆ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸುವುದರ ಮೂಲಕ ಬದುಕು ಕಟ್ಟಿಕೊಳ್ಳುವ ಕಾರ್ಯಕ್ಕೆ ಮುಂದಾಗಬೇಕು ಒಂದು ಕುಟುಂಬದ ನಿರ್ವಹಣೆ ಸುಲಭ ಮಾತಲ್ಲ ದುಬಾರಿ ಬೆಳೆ ಏರಿಕೆ ಮಧ್ಯೆ ಜೀವನ ನಡೆಸುವುದು ಕಷ್ಟದಾಯಕವಾಗಿದೆ.

ಈ ಹಿನ್ನೆಲೆಯಲ್ಲಿ ನಗರಸಭೆಯ ಮಟ್ಟದಲ್ಲಿ ಗಮನಿಸಿದಾಗ ತಾತ್ಕಾಲಿಕ ಪಟ್ಟಣ ವ್ಯಾಪಾರ ಸಮಿತಿಯನ್ನು ರಚಿಸಲಾಗಿದೆ ಬೀದಿ ವ್ಯಾಪಾರಕ್ಕೆ ಸಂಬಂಧಪಟ್ಟಂತೆ ಎಲ್ಲಾ ನಿರ್ಧಾರಗಳನ್ನು ಈ ಸಮಿತಿಯು ನಿರ್ಧರಿಸಬೇಕಾಗುತ್ತದೆ ಇವೆಲ್ಲವನ್ನೂ ಕಡೆಗಣಿಸಿ ಇದ್ದಕ್ಕಿದ್ದಂತೆ ಒಕ್ಕಲಿಬ್ಬುವುದು ಕಾನೂನುಬಾಹಿರವಾಗಿದೆ ಎಂದು ಗಂಭೀರವಾದ ಆರೋಪ ಮಾಡಿದರು.

ಬಳಿಕ ಸರ್ಕಾರದ ವಿರುದ್ಧ ಘೋಷಣೆಗಳನ್ನು ಹೋಗಿ ಪ್ರತಿಭಟಿಸಿ ನಗರಸಭೆಯ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿದರು

### ಮಕ್ಕಳ ಪ್ರತಿಭೆಗೆ ವೇದಿಕೆ : ಸಾಧಕರಿಗೆ ಸನ್ಮಾನ

## ವೇದಗಂಗಾ ಅಕಾಡೆಮಿ ಸಮಾರೋಪ ಸಮಾರಂಭ

**ಬೆಳಗಾವಿ ವಾರ್ತೆ ಗಂಗಾವತಿ :** ನಗರದ ಲಯನ್ಸ್ ಕ್ಲಬ್ ಭವನದಲ್ಲಿ ವೇದಗಂಗಾ ಅಕಾಡೆಮಿ ವತಿ ಯಿಂದ ಆಯೋಜಿಸಲಾದ 45 ದಿನಗಳ ಸಮ್ಮರ್ ಕ್ಯಾಂಪ್ ಸಮಾರೋಪ ಸಮಾ ರಂಭವು ಅದ್ದೂರಿಯಾಗಿ ನೆರವೇರಿತು.

ಶಿಬಿರದಲ್ಲಿ ಭಾಗವಹಿಸಿದ ಮಕ್ಕಳಿಗೆ ವಿವಿಧ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡಲಾಗಿದ್ದು, ಅನೇಕ ಸ್ಪರ್ಧೆಗಳ ಮೂಲಕ ಅವರ ಪ್ರತಿಭೆಯನ್ನು ಹೊರಹಾಕಲು ಅವಕಾಶ ಕಲ್ಪಿಸಲಾಯಿತು.

ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಹಾಗೂ ಮುಖ್ಯ ಅತಿಥಿಗಳಾಗಿ ಆಗಮಿಸಿದ ಗಣ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಉದ್ಘಾಟಕರಾಗಿ ಆಗಮಿಸಿದ್ದ ಸಿಎನ್‌ಆರ್ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಕರೀಗೂಳಿ ಅವರು



ಮಾತನಾಡಿ, ಇಂತಹ ಶಿಬಿರಗಳು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿದ್ದು, ವ್ಯಕ್ತಿತ್ವ ವಿಕಾಸಕ್ಕೆ ದಾರಿಯಾಗುತ್ತವೆ ಎಂದು ಹೇಳಿದರು.

ಮಕ್ಕಳ ಪ್ರತಿಭೆಯನ್ನು ಗುರುತಿಸಿ ಉತ್ತೇಜಿಸುವಲ್ಲಿ ಪಾಲಕರ ಪಾತ್ರ ಅತ್ಯಂತ ಮಹತ್ವದ್ದೆಂದು ಅವರು ಅಭಿಪ್ರಾಯ ಪಟ್ಟರು. ವೇದಗಂಗಾ ಅಕಾಡೆಮಿಯ ಆಡಳಿತಾ ಧಿಕಾರಿಗಳು ಹಾಗೂ ಕೊಪ್ಪಳ, ಧಾರವಾಡ ಜಿಲ್ಲೆಯ ವಿತರಕರಾದ ಮಂಜುಳಾ ಹೆಳವರ್ ಪ್ರಸ್ತಾವಿಕವಾಗಿ ಮಾತನಾಡಿ, ಇಂದಿನ ಕಾಲಘಟ್ಟದಲ್ಲಿ ಮಕ್ಕಳನ್ನು ಮೊಬೈಲ್ ವ್ಯಸನದಿಂದ ದೂರವಿಡುವುದು ಅಗತ್ಯವಾಗಿದೆ ಎಂದು ಹೇಳಿದರು.

ವೇದಗಣಿತ, ಅಬಾಕಸ್, ದುಂಡು ಬರಹ, ಕ್ಯಾಲಿಗ್ರಫಿ, ರೂಬಿಕ್ ಕ್ಯೂಬ್, ಆರ್ಟ್ ಮತ್ತು ಕ್ರಾಫ್ಟ್, ರೋಬೋಟಿಕ್ಸ್, ೦ಖ ಸೇರಿದಂತೆ ವಿವಿಧ ತರಬೇತಿಗಳ ಮೂಲಕ ಮಕ್ಕಳ ಮಾನಸಿಕ ಹಾಗೂ ದೈಹಿಕ ಅಭಿವೃದ್ಧಿಗೆ ಅಕಾಡೆಮಿ ಸಹಕಾರ ನೀಡುತ್ತಿದೆ ಎಂದು ತಿಳಿಸಿದರು.

ಜೊತೆಗೆ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶಗಳು ಹಾಗೂ ಶಿಕ್ಷಕರಿಗೆ ತರಬೇತಿ ಕಾರ್ಯಕ್ರಮಗಳನ್ನೂ ರೂಪಿಸಿರುವುದಾಗಿ ವಿವರಿಸಿದರು.

ಪ್ರಶಸ್ತಿ ವಿತರಕರಾಗಿ ಆಗಮಿಸಿದ ಐಡಿಪಿಎಸ್ ಶಾಲೆಯ ನಿರ್ದೇಶಕರಾದ ನಾಗರಾಜ್ ಅವರು ವಿಜೇತರಾದ ಎಲ್ಲಾ ಮಕ್ಕಳಿಗೆ ಪ್ರಶಸ್ತಿ ವಿತರಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ನಟೇಶ್ ಎಚ್.ಬಿ., ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷರಾದ ಶಿವಶಂಕರ್, ಕಾರ್ಯದರ್ಶಿ ಶರಣಪ್ಪ ಹಕ್ಕಂಡಿ, ಬೇತಲ್ ಸಮೂಹ ಸಂಸ್ಥೆಯ ಆಡಳಿತಾಧಿಕಾರಿಗಳಾದ ಹೇಮಾ ಸುಧಾಕರ್, ಬೇತಲ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಬಸವರಾಜ ಕೆ., ಪತ್ರಕರ್ತರಾದ ಶರಣಬಸವ ಹುಲಿಹೈದರ್, ಪ್ರಾ.ಶಾ.ಶಿ. ಪ. ಸ.ಸಂಘದ ಅಧ್ಯಕ್ಷರಾದ ಶಿವಾನಂದ ಶಿಳ್ಳಿನ, ನಿರ್ದೇಶಕರಾದ ಆಶಾರಾಣಿ, ಕೆವೈಟಿಸಿ ಸದಸ್ಯರಾದ ಸೌಮ್ಯಶ್ರೀ, ಉಪನ್ಯಾಸಕರಾದ ಚಿದಾನಂದ ಮೇಟಿ, , ಹಾಗೂ ವೇದಗಂಗಾ ಅಕಾಡೆಮಿ ಶಿಕ್ಷಕಿಯರಾದ ಐಶ್ವರ್ಯ ಮತ್ತು ನೇತ್ರಾ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಸರ್ಕಾರದ ಸೌಲಭ್ಯಗಳ ವಂಚಿತ ಬೆಳೆಸಮೀಕ್ಷೆದಾರರು



**ಬೆಳಗಾವಿ ವಾರ್ತೆ ಹೂವಿನ ಹಿಪ್ಪರಗಿ:** ಬಸವನ ಬಾಗೇವಾಡಿ ತಾಲೂಕಿನಾದ್ಯಂತ ಕೃಷಿ ಇಲಾಖೆ ಅಡಿಯೊಳಗೆ ಸತತವಾಗಿ ಸುಮಾರು 8–10 ವರ್ಷಗಳಿಂದ 95 ಜನ ಬೆಳೆಸಮಿಕ್ಷೆದಾರರು ಕಾರ್ಯ ನಿರ್ವಹಿಸುತ್ತಾ ಬಂದಿದ್ದಾರೆ. ಸರಕಾರದ ಸೌಲಭ್ಯಗಳಿಂದ ವಂಚಿತರಾಗಿರುವ ಅವರು ಸಂಘಟನೆಮುಖಾಂತರ ನ್ಯಾಯ ಸಮ್ಮತವಾದ ಸೌಲಭ್ಯಗಳನ್ನು ಪಡೆದುಕೊಳ್ಳುವ ನಿಟ್ಟಿನಲ್ಲಿ ಅಖಿಲ ಕರ್ನಾಟಕ ಬೆಳೆ ಸಮೀಕ್ಷೆದಾರರ ಸಂಘಟನೆಯನ್ನು ಇಡೀ ರಾಜ್ಯ ವ್ಯಾಪಿ ಕಟ್ಟಿಕೊಂಡಿದ್ದಾರೆ. ಈ ಸಂಘಟನೆಯ ಅಂಗ ಘಟಕವಾಗಿ ಕಾರ್ಯ ನಿರ್ವಹಿಸಲು ಬಸವನ ಬಾಗೇವಾಡಿ ತಾಲೂಕಿನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಇತ್ತೀಚೆಗೆ ಬಸವನ ಬಾಗೇವಾಡಿಯ ಶ್ರೀ ಬಸವೇಶ್ವರ ದೇವಾಲಯ ಆವರಣದ ಉದ್ಯಾನವನದಲ್ಲಿ ರಾಜ್ಯ ಸಮಿತಿಯ ಸದಸ್ಯರುಗಳ ನೇತೃತ್ವದಲ್ಲಿ ನೆರವೇರಿಸಲಾಯಿತು. ಬಸವನ ಬಾಗೇವಾಡಿ ತಾಲೂಕಾ ಅಂಗ ಘಟಕದ ಗೌರವ ಅಧ್ಯಕ್ಷರಾಗಿ ರಾಯಪ್ಪ ದಳವಾಯಿ, ತಾಲೂಕಿನ ಅಧ್ಯಕ್ಷರಾಗಿ ಹಾಗೂ ಜಿಲ್ಲಾ ಘಟಕದ ಸಹಕಾರ್ಯದರ್ಶಿಯೂ ಆಗಿ ಶಿವರಾಜ ಪೂಜಾರಿ, ಉಪಾಧ್ಯಕ್ಷರಾಗಿ ನಾಗಪ್ಪ ಚಿಗರಿ, ಪ್ರಧಾನ ಕಾರ್ಯದರ್ಶಿಯಾಗಿ ನಬಿಸಾಹೇಬ ಕರಜಗಿ, ಸಹಕಾರ್ಯದರ್ಶಿಯಾಗಿ ಮಲ್ಲಪ್ಪ ಬೊಮ್ಮನಹಳ್ಳಿ , ಖಜಾಂಚಿಯಾಗಿ ಅಮೂಲ ಹರಿಜನ, ಸಂಘಟನಾ ಕಾರ್ಯ ದರ್ಶಿ ಯಾಗಿ ಕುಮ್ಮಣ್ಣ ಕಂಟೆಪ್ಪಗೋಳ, ಸಂಚಾಲಕರಾಗಿ ಸಂಗಮೇಶ ಮುರಾಳ, ಸದಸ್ಯರು ಗಳಾಗಿ ಮುತ್ತಪ್ಪ ಕೊಂಡಗೂಳಿ, ದೀಪಕ ಹರಿಜನ ಹಾಗೂ ವಿಕಾಸ ಸುಸಲಾದಿ ಈ ಎಲ್ಲಾ ಪದಾಧಿಕಾರಿಗಳಿಗೆ ರಾಜ್ಯಾಧ್ಯಕ್ಷರಾದ ಭೀಮಪ್ಪ ಲಕ್ಷ್ಮಣ ತಳವಾರ ಅವರು , ಸಂಸ್ಥಾಪಕರಾದ ನರಸಪ್ಪ ಅರ್ಜುನ್ ನಾವಿ ಅವರ ಸಮ್ಮುಖದಲ್ಲಿ ಪ್ರಮಾಣ ವಚನ ಬೋಧಿಸಿದರು. ಈ ಒಂದು ಕಾರ್ಯಕ್ರಮಕ್ಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜಕುಮಾರ ಪ್ರಬುದ್ಧಕರ ಕಲಬುರ್ಗಿ ಜಿಲ್ಲೆಯಿಂದ ರಾಜ್ಯ ಖಜಾಂಚಿ ಬಸವರಾಜ ಹೊಳೆದಾಸರ ಮತ್ತು ರಾಜಶೇಖರ ಶಿವನಿಚ್ಚಿ ಬಾಗಲಕೋಟೆಯಿಂದ ಸದಪ್ಪ ಜಡಗನ್ನವರ ಮತ್ತು ಸಲೀಮ ಗೋಕಾಂವಿ ಹಾಗೂ ವಿಜಯಪುರ ಜಿಲ್ಲೆಯ ಸಮಸ್ತ ತಾಲೂಕಾ ಘಟಕದ ಪದಾಧಿಕಾರಿಗಳು ಕೂಡಾ ಬಂದುಭಾಗವಹಿಸಿದ್ದರು.

# ವಿಜಯಪುರ ಜಿಲ್ಲಾ ಆಸ್ಪತ್ರೆಯಲ್ಲಿ ಅವ್ಯವಸ್ಥೆ ಖಂಡಿಸಿ ಪ್ರತಿಭಟನೆ

**ಬೆಳಗಾವಿ ವಾರ್ತೆ ವಿಜಯಪುರ:** ಇಲ್ಲಿನ ಜಿಲ್ಲಾಸ್ಪತ್ರೆಯ ಖಂಡಿಸಿ ಸರ್ಕಾರಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿ ಮಂಗಳವಾರ ಪ್ರತಿಭಟನೆ ನಡೆಸಿದೆ.

ನಗರದ ಜಿಲ್ಲಾ ಆಸ್ಪತ್ರೆಯಲ್ಲಿ ತೀವ್ರ ಅವ್ಯವಸ್ಥೆಯಿಂದ ರೋಗಿಗಳು ದುರಂತ ಅನುಭವಿಸುತ್ತಿದ್ದಾರೆ. ಪ್ರತಿದಿನ 2,000 ರಿಂದ 3,000ಕ್ಕೂ ಹೆಚ್ಚು ಹೊರ ರೋಗಿಗಳು ಇಂಡಿ, ಮುದ್ದೇಬಿಹಾಳ, ಸಿಂದಗಿ ತಾಲ್ಲೂಕುಗಳಿಂದ, ಬಾಗಲಕೋಟೆ , ಬೆಳಗಾವಿ ಜಿಲ್ಲೆಗಳಿಂದ ಹಾಗೂ ಮಹಾರಾಷ್ಟದ ಸಾಂಗ್ಲಿ ಮತ್ತು ಜತ್ತ ಜಿಲ್ಲೆಗಳಿಂದ ಬರುತ್ತಿದ್ದರೂ ಸಹ, ಆಸ್ಪತ್ರೆಯಲ್ಲಿ ಕನಿಷ್ಠ ಮೂಲಭೂತ ವ್ಯವಸ್ಥೆಯನ್ನೂ ಕಲ್ಪಿಸಲಾಗಿಲ್ಲ ಎಂದು ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಜಿಲ್ಲಾಸ್ಪತ್ರೆಯಲ್ಲಿ ಎಂಆರ್‌ಐ, ಸಿಟಿ ಸ್ಕ್ಯಾನ್, ಸೂಪರ್ ಸ್ಪೆಷಾಲಿಟಿ ಕಟ್ಟಡ, ಪಂಚ ಕರ್ಮ ಚಿಕಿತ್ಸಾಲಯ, 670 ಹಾಸಿಗೆಗಳ ಜನರಲ್ ಆಸ್ಪತ್ರೆ, 150 ಹಾಸಿಗೆಗಳ ತಾಯಿ–ಮಕ್ಕಳ ಆಸ್ಪತ್ರೆ, 60 ಹಾಸಿಗೆಗಳ ಟ್ರಾಮಾ ಸೆಂಟರ್, ತುರ್ತು ನಿಗಾ ಘಟಕ, ಆಕ್ಸಿಜನ್ ಪ್ಲಾಂಟ್ ಹಾಗೂ ಹೈಟೆಕ್ ಶವಾಗಾರ ಗಳಂತಹ ಅತ್ಯಾಧುನಿಕ ಸೌಲಭ್ಯಗಳಿದ್ದರೂ, ರೋಗಿಗಳಿಗೆ ಚೀಟಿ ಪಡೆಯುವಲ್ಲಿ ತೀವ್ರ ತೊಂದರೆಯಾಗುತ್ತಿದೆ ಎಂದು ದೂರಿದರು.

ಬೆಳಿಗ್ಗೆ 8 ಗಂಟೆಯಿಂದಲೇ ಬಂದ ರೋಗಿಗಳು ಮೂರು ಗಂಟೆಗಟ್ಟಲೆ ಸರತಿ ಸಾಲಿನಲ್ಲಿ ನಿಂತರೂ ಚೀಟಿ ಸಿಗದೆ ಕೋಪದಿಂದ ವಾಪಸ್ಸು ಊರಿಗೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಪ್ರತಿಭಟನೆಕಾರರು ದೂರಿದ್ದಾರೆ.

ದೂರದ ಜಮಖಂಡಿ, ಕುಂಟೋಜಿ, ಕಲಕೇರಿ, ಸಾಂಗ್ಲಿ ಮತ್ತು ಜತ್ತದಿಂದ ಬಂದ ವಯಸ್ಸಾದವರು, ಗರ್ಭಿಣಿ ಮಹಿಳೆಯರು, ಬಾಣಂತಿಯರು ಮತ್ತು ಮಕ್ಕಳು ಬಿಸಿಲಿನಲ್ಲಿ ನಿಂತು ಪರಿತಪಿಸುತ್ತಿದ್ದಾರೆ. ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಸಾಕಷ್ಟು ಜಾಗ ಇದ್ದರೂ ಕೌಂಟರ್‌ಗಳನ್ನು ಮುಚ್ಚಿ ಎಲ್ಲಾ ರೋಗಿಗಳನ್ನು ಒಂದೇ ಕಡೆಗೆ ನೂಕುವುದರಿಂದ ನೂಕುನುಗ್ಗಲು ಹೆಚ್ಚಾಗಿ ತೀವ್ರ ತೊಂದರೆಯಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಈ ಅವ್ಯವಸ್ಥೆಯನ್ನು ಖಂಡಿಸುತ್ತಾ ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿ ಈ ಕೆಳಕಂಡ ಬೇಡಿಕೆಗಳನ್ನು ತಕ್ಷಣ ಈಡೇರಿಸುವಂತೆ ಜಿಲ್ಲಾ ಆಡಳಿತ, ಆರೋಗ್ಯ ಇಲಾಖೆ ಮತ್ತು ಸರ್ಕಾರಕ್ಕೆ ವಿಜಯಪುರ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಶಿವಾನಂದ್




ಮಾಸ್ತಿಹೊಳಿ ಅವರಿಗೆ ಮನವಿ ಮಾಡಿದೆ.

ಕೂಡಲೇ ಅಗತ್ಯಕ್ಕೆ ತಕ್ಕಷ್ಟು ಹೆಚ್ಚುವರಿ ಕೌಂಟರ್‌ಗಳನ್ನು ತೆರೆಯುವುದು.

ಎಲ್ಲಾ ರೋಗಗಳಿಗೆ ಸಂಬಂಧಿಸಿದ ಪರೀಕ್ಷೆಗಳನ್ನು ಆಸ್ಪತ್ರೆಯಲ್ಲೇ ಮಾಡುವ ವ್ಯವಸ್ಥೆ ಕಲ್ಪಿಸುವುದು.

ಎಲ್ಲಾ ಅಗತ್ಯ ಔಷಧಿಗಳನ್ನು ರೋಗಿಗಳಿಗೆ ಉಚಿತವಾಗಿ ಒದಗಿಸುವುದು. ಚೀಟಿ ಪಡೆಯುವ ಸರತಿ ಸಾಲಿನಲ್ಲಿ ರೋಗಿಗಳಿಗೆ ನೆರಳು, ಕುರ್ಚಿ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡುವುದು. ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಪ್ರತ್ಯೇಕ ಕೌಂಟರ್‌ಗಳನ್ನು ತಕ್ಷಣ ತೆರೆಯುವುದು. ಯಾವುದೇ ಪಾರ್ಕಿಂಗ್ ದರ ಇರಕೂಡದು ಹಾಗೂ ಅದನ್ನು ಸಂಪೂರ್ಣ ರದ್ದು ಮಾಡಬೇಕು.

ಈ ಎಲ್ಲ ಬೇಡಿಕೆಗಳಿಗೆ ತಕ್ಷಣ ಸ್ಪಂದಿಸಿ ಪರಿಹರಿಸದಿದ್ದರೆ ಹೋರಾಟ ಸಮಿತಿ ತೀವ್ರ ಹೋರಾಟಕ್ಕೆ ಮುಂದಾಗುವುದೆಂದು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿಯ ಸದಸ್ಯರುಗಳಾದ ಬಿ. ಭಗವಾನ್ ರೆಡ್ಡಿ, ಅರವಿಂದ ಕುಲಕರ್ಣಿ, ಲಲಿತಾ ಬಿಜ್ಜರಗಿ, ಮಲ್ಲಿಕಾರ್ಜುನ ಬಟಗಿ, ಬಾಬುರಾವ ಬೀರಕಬ್ಬಿ, ಸುರೇಶ ಬಿಜಾಪುರ, ಸಿದ್ದಲಿಂಗ ಬಾಗೇವಾಡಿ, ಭರತಕುಮಾರ ಎಚ್.ಟಿ, ಮಲ್ಲಿಕಾರ್ಜುನ ಎಚ್.ಟಿ, ಗೀತಾ ಎಚ್, ನೀಲಂಬಿಕಾ ಬಿರಾದಾರ, ಲಿಂಗರಾಜ ಬಿದರಕುಂದಿ, ಸಂತೋಷ ನಾಯಕ, ಭೀಮು ಉಪ್ಪಾರ, ಜಗದೇವ ಸೂರ್ಯವಂಶಿ, ಡಾ. ಗುರಿಕರ್, ಸುಶೀಲಾ ಮಿಣಜಗಿ, ಜ್ಯೋತಿ ಮಿಣಜಗಿ, ಭಾಗ್ಯ ಮಿಣಜಗಿ, ಸಲಿಂ ಹೊಕ್ಕರಣಿ, ಭೋಗೇಶ ಸೋಲಾಪುರ ಮತ್ತಿತರ ಮುಂಖಡರು ಉಪಸ್ಥಿತರಿದ್ದರು.

# ಮಸಣವಾಟ ಜಮೀನು : ಆಕ್ಷೇಪಣೆ ಸಲ್ಲಿಕೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ಬನಹಟ್ಟಿ ಗ್ರಾಮದ ಸ.ನಂ.12/1ರಲ್ಲಿನ 11.14 ಎಕರೆ ವಿಸ್ತೀರ್ಣ ಪೈಕಿ 3.25 ಎಕರೆ ಸಾರ್ವಜನಿಕರ ಉಪಯೋಗಕ್ಕೆ ಸಗತ್ಯವಿಲ್ಲವೆಂದು ಮತ್ತು ಸಾರ್ವಜನಿಕ ಮಸಣವಾಟ ಜಮೀನಿನ ಭಾಗದಲ್ಲಿ ಸಾರ್ವಜನಿಕರು ಹಾಗೂ ಎಲ್ಲ ವ್ಯಕ್ತಿಗಳ ಹಕ್ಕುಳು ಕೊನೆಗೊಳ್ಳತಕ್ಕದ್ದೆಂದು ಜಿಲ್ಲಾಧಿಕಾರಿಗಳು 94ನೇ ನಿಯಮದ 68(1)ನೇ ಪ್ರಕರಣದ ಮೇರೆಗೆ ಘೋಷಿಸಿದ್ದಾರೆ. ಇದರ ಮೇಲೆ ಆಕ್ಷೇಪಣೆಗಳು ಇದ್ದಲ್ಲಿ ಅಧಿಸೂಚನೆ ಹೊರಡಿಸಿದ 30 ದಿನಗಳೊಳಗಾಗಿ ಲಿಖಿತ ರೂಪದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಕಾಂಗ್ರೆಸ್ ಸರ್ಕಾರದ ಮೂರು ವರ್ಷದ ಅವಧಿಯಲ್ಲಿ 300 ವೈಫಲ್ಯ: ಜಿಗಜಿಣಗಿ ಟೀಕೆ



**ಬೆಳಗಾವಿ ವಾರ್ತೆ ವಿಜಯಪುರ:** ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೂರು ವರ್ಷದ ಆಡಳಿತದಲ್ಲಿ 300 ವೈಫಲ್ಯಗಳಿವೆ ಎಂದು ವಿಜಯಪುರ ಸಂಸದ ರಮೇಶ ಜಿಗಜಿಣಗಿ ಟೀಕಿಸಿದ್ದಾರೆ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರದ ಮೂರು ವರ್ಷಗಳ ಅವಧಿಯಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಅವರ ಕೊರಳಿಗೆ 300 ವೈಫಲ್ಯಗಳ ಹಾರ ಹಾಕುವುದಾಗಿ ಹೇಳಿದರು.

ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಸಿದ್ದರಾಮಯ್ಯನವರು ಪ್ರತಿಯೊಂದು ವಸ್ತುವಿನ ಮೇಲೆ ದುಬಾರಿ ತೆರಿಗೆ ಹಾಕಿ ಗ್ಯಾರಂಟಿ ಯೋಜನೆಗಳಿಗೆ ನೀಡುತ್ತಿದ್ದಾರೆ. ಬಡವರಿಗೆ ಗ್ಯಾರಂಟಿ ಯೋಜನೆಗಳನ್ನು ಕೊಡಲು ನಮ್ಮದೇನೂ ಅಭ್ಯಂತರವಿಲ್ಲ. ಸರ್ಕಾರದ ಬಳಿ ಹಣವಿದ್ದರೆ ಮಾತ್ರ ಇಂಥ ಯೋಜನೆಗಳನ್ನು ಕೈಗೆತ್ತಿಕೊಳ್ಳಬೇಕು ಎಂದರು.

ಸಿದ್ದರಾಮಯ್ಯ ಸರ್ಕಾರ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಯೋಜನೆ ಜಾರಿಗೆ ತಂದು ಮಹಿಳೆಯರ ಗಂಡನ ಜೇಬಿಗೆ ಕೈಹಾಕಿದೆ. ಈ ರೀತಿ ಹಿಂದೆ ಯಾವ ಸರ್ಕಾರ ಮಾಡಿಲ್ಲ. ಗ್ರಾಮೀಣ ಪ್ರದೇಶದಲ್ಲಿ ಪ್ರಚಲಿತ ಇರುವಂತೆ ಸಿದ್ದರಾಮಣ್ಣ ಅವರ ಸರ್ಕಾರ ಜಂಪರ್ ನಲ್ಲಿ ಕಡಿತ ಮಾಡಿ ಸೀರೆಯಲ್ಲಿ ಹಿಡಿದಿದೆ ಎಂದು ಲೇವಡಿ ಮಾಡಿದರು.

ಮಾಜಿ ಸಚಿವ ಅಪ್ಪಸಾಹೇಬ ಪಟ್ಟಣಶೆಟ್ಟಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ಗುರುಲಿಂಗಪ್ಪ ಅಂಗಡಿ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

# ವಿದ್ಯುತ್ ಸ್ಪರ್ಶದಿಂದ ಬಾಲಕನ ಸಾವು: ಸಾಂತ್ವನ



**ಬೆಳಗಾವಿ ವಾರ್ತೆ ಕುಂದಗೋಳ:** ತಾಲ್ಲೂಕಿನ ಗುಡಗೇರಿ ಗ್ರಾಮದಲ್ಲಿ ವಿದ್ಯುತ್ ತಗಲಿ 10 ವರ್ಷದ ಬಾಲಕ ಕಾರ್ತಿಕ ಪೂಜಾರ ಮೃತಪಟ್ಟ ಘಟನೆ ತೀವ್ರ ನೋವುಂಟು ಮಾಡಿದೆ ಎಂದು ಶಾಸಕ ಎಂ ಆರ್ ಪಾಟೀಲ ಹೇಳಿದರು.

ಘಟನೆಯ ಹಿನ್ನಲೆಯಲ್ಲಿ ಅವರು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಮೃತ ಬಾಲಕನ ಕುಟುಂಬಸ್ಥರಿಗೆ ಸಾಂತ್ವನ ಹೇಳಿ ವೈಯಕ್ತಿಕ ಸಹಾಯಧನ ನೀಡಿದರು.

ಇಂಥ ದುರ್ಘಟನೆಗಳು ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ತಿಳಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾಹಂತೇಶ ಶ್ಯಾಗೋಟಿ, ಉಮೇಶ ಹೇಬಸೂರ,ಬಸನಗೌಡ ಕರೆಹೊಳಲಪ್ಪನವರ್ ಸಹದೇವ ಮಾಳಗಿ,ಬಸವರಾಜ ನಾಗನಾಯ್ಕರ, ವಿನಾಯಕ ಮುನ್ನಾಳಕೆರಿ ಇದ್ದರು.

# ಧಾರವಾಡ ಹಾಗೂ ಹಾವೇರಿ ಜಿಲ್ಲಾ ಪೊಲೀಸ್ ಭರ್ಜರಿ ಜಂಟಿ ಕಾರ್ಯಾಚರಣೆ ಅಂತರ್ ರಾಜ್ಯ ಕಳ್ಳರಿಂದ ಸುಮಾರು 1 ಕೋಟಿ 15 ಲಕ್ಷ ಮೌಲ್ಯದ ಬೆಳ್ಳಿ ಬಂಗಾರದ ಆಭರಣಗಳ ವಶ

**ಬೆಳಗಾವಿ ವಾರ್ತೆ ಧಾರವಾಡ:** ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯ ಕಿರೇಸೂರ ಗ್ರಾಮದಲ್ಲಿ ಕಳೆದ ಎಪ್ರೀಲ್ ತಿಂಗಳಲ್ಲಿ ಜರುಗಿದ ಮನೆ ಕಳ್ಳತನ ಮತ್ತು ಹಾವೇರಿ ಜಿಲ್ಲೆ ಹಾನಗಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಳೆದ ಎರಡು ದಿನಗಳ ಹಿಂದೆ ನಡೆದ ಒಂದು ಬಂಗಾರದ ಅಂಗಡಿ ಕಳ್ಳತನ ಪ್ರಕರಣಗಳಲ್ಲಿ ಕಳುವಾದ ಮಾಲು ಮತ್ತು ಆರೋಪಿತರ ಪತ್ತೆ ಕುರಿತು, ಹುಬ್ಬಳ್ಳಿ ಗ್ರಾಮೀಣ ಠಾಣೆ, ನವಲಗುಂದ ಪೊಲೀಸ್ ಠಾಣೆ ಮತ್ತು ಹಾನಗಲ್ ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಸಿಬ್ಬಂದಿ ಜನರು ಜಂಟಿ ಕಾರ್ಯಾಚರಣೆ ಕೈಕೊಂಡು ಪ್ರಕರಣ ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಧಾರವಾಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಳ್ಳತನ ಪ್ರಕರಣದ ಆರೋಪಿತರಾದ ಶಿವರಾಜ ಹನಮಂತಪ್ಪ ಮೋಡಕೇರ ಸಾ:ಬಾಳೆಹೊಸೂರ ತಾ:ಲಕ್ಷ್ಮೇಶ್ವರ ಹಾಗೂ ಅಶೋಕ @ ರಮೇಶ ತಂದೆ ಶಿವಪ್ಪ ಕೊಂಚಿಕೊರವರ ಸಾ:ಅಂಬಾಮಠ ತಾ:ಶಿಂದನೂರ ಇವರನ್ನು ಬಂಧಿಸಿ 310 ಗ್ರಾಂ ಬಂಗಾರದ ಆಭರಣಗಳು ಮತ್ತು 26 ಕೆ.ಜಿ ಬೆಳ್ಳಿಯ



ಆಭರಣಗಳು, ಹಾಗೂ ತೆಲಂಗಾಣ ರಾಜ್ಯದಲ್ಲಿ ಕಳ್ಳತನ ಮಾಡಿದ ಒಂದು ಬುಲೆರೋ ವಾಹನ ಸೇರಿ ಸುಮಾರು 1 ಕೋಟಿ 15 ಲಕ್ಷ ಕಿಮ್ಮತ್ತಿನ ವಸ್ತುಗಳನ್ನು ಜಪ್ತ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಧಾರವಾಡ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಗುಂಜನ್ ಆರ್ಯ ಮತ್ತು ಹಾವೇರಿ ಜಿಲ್ಲೆ ಪೊಲೀಸ್ ಅಧೀಕ್ಷಕರಾದ ಯಶೋದಾ ವಂಟಗೋಡಿ ಅವರ ಮಾರ್ಗದರ್ಶನದಲ್ಲಿ, ಧಾರವಾಡ ಜಿಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆ, ಪೊಲೀಸ್ ಉಪ ಅಧೀಕ್ಷಕ ಶಿವಾನಂದ ಕಟಗಿ, ಧಾರವಾಡ ಗ್ರಾಮೀಣ ಉಪ ವಿಭಾಗ ಪೊಲೀಸ್ ಉಪ ಅಧೀಕ್ಷಕ ವಿನೋದ ಮುಕ್ತಧಾರ ಅವರ ಮುಂದಾಳತ್ವದಲ್ಲಿ ಹುಬ್ಬಳ್ಳಿ ಗ್ರಾಮೀಣ ಠಾಣೆಯ ಪೊಲೀಸ್ ಇನ್ಸಪೆಕ್ಟರ್ ಮುರುಗೇಶ ಚನ್ನಣ್ಣವರ, ನವಲಗುಂದ ವೃತ್ತ ಸಿಪಿಐ ರವಿ ಕಪ್ಪತ್ತಣವರ, ಹಾನಗಲ್ ವೃತ್ತ ಸಿಪಿಐ ಬಸವರಾಜ ಹಳಬಣ್ಣವರ, ಹುಬ್ಬಳ್ಳಿ ಗ್ರಾಮೀಣ ಪಿಎಸ್‌ಐ ಇಮ್ರಾನ ಪಠಾಣ ಹಾಗೂ ಹಾವೇರಿ ಜಿಲ್ಲೆಯ ಪಿಎಸ್‌ಐ ಸಂಪತ್, ಸಿಬ್ಬಂದಿಗಳಾದ ಶರಣಪ್ಪ, ಮಂಜುನಾಥ, ಯಲ್ಲಪ್ಪ ಮತ್ತು ಹುಬ್ಬಳ್ಳಿ ಗ್ರಾಮೀಣ ಠಾಣೆಯ ಅಪರಾಧ ದಳದ ಎಎಸ್‌ಐ ಎನ್ ಎಮ್ ಹೊನ್ನಪ್ಪನವರ, ಸಿಬ್ಬಂದಿಗಳಾದ ಎಚ್.ಬಿ.ಐಹೋಳೆ, ಅಬ್ದುಲ್ ಕಾಕರ, ಚನ್ನಪ್ಪ ಬಳ್ಳೊಳ್ಳಿ, ಮಾಂತೇಶ ಮದ್ದೀನ ಮತ್ತು ನವಲಗುಂದ ಠಾಣೆಯ ಸಿಬ್ಬಂದಿಗಳಾದ ಮುತ್ತಪ್ಪ ಭಜಂತ್ರಿ, ಸದಾಶಿವ ಮುಳ್ಳೂರ, ಶ್ರೀಧರ ಕಡಕೋಳ, ಎಸ್.ಬಿ.ಕಳ್ಳಿಮನಿ, ಗೂಳಪ್ಪ ಜಗಲಿ ಹಾಗೂ ತಾಂತ್ರಿಕ ಸಿಬ್ಬಂದಿಯಾದ ವಿಠಲ ಡಂಗನವರ ಇವರನ್ನೊಳಗೊಂಡ ತಂಡ ಸೇರಿ ಚುರುಕಿನ ಜಂಟಿ ಕಾರ್ಯಾಚರಣೆ ನಡೆಸಿ ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸದರಿ ಆರೋಪಿತರನ್ನು ಬಂಧಿಸಿ ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯ ಮತ್ತು ಹಾವೇರಿ ಜಿಲ್ಲೆ ಹಾನಗಲ್ ಪೊಲೀಸ್ ಠಾಣೆಯ ಎರಡೂ ಸ್ವತ್ತಿನ ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ತಿಳಿಸಿದ್ದಾರೆ.

ಒಟ್ಟು 6 ಜನ ಆರೋಪಿತರ ತಂಡದಲ್ಲಿ 4 ಜನ ಆರೋಪಿತರು ಪರಾರಿ ಇದ್ದು, ಅವರ ಬಂಧನಕ್ಕೂ ಬಲೆ ಬೀಸಲಾಗಿದೆ. ಸದರಿ ಪ್ರಕರಣವನ್ನು ಸಿನಿಮೀಯ ರೀತಿಯಲ್ಲಿ ಭೇದಿಸಿದ ಹುಬ್ಬಳ್ಳಿ ಗ್ರಾಮೀಣ ಠಾಣೆಯ ಇನ್ಸಪೆಕ್ಟರ್, ಸಿಪಿಐ ನವಲಗುಂದ ವೃತ್ತ ಮತ್ತು ಸಿಪಿಐ ಹಾನಗಲ್ ವೃತ್ತ ಹಾಗೂ ಸಿಬ್ಬಂದಿ ಜನರ ಕಾರ್ಯವನ್ನು ಶ್ಲಾಘಿಸಿ, ಸೂಕ್ತ ಬಹುಮಾನ ಘೋಷಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೀರಶೈವ–ಲಿಂಗಾಯತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಬಾಗಲಕೋಟೆ : ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಅಡಿಯಲ್ಲಿ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿ.ಯು.ಸಿ ಪರೀಕ್ಷೆಗಳಲ್ಲಿ ಶೇಕಡ 90 ಹಾಗೂ 90ಕ್ಕಿಂತ ಹೆಚ್ಚು ಅಂಕ ಗಳಿಸಿರುವ ವೀರಶೈವ/ಲಿಂಗಾಯತ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ"ಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಮಹಾಸಭೆಯ www.aivlm.org ವೆಬ್‌ಸೈಟಿನಲ್ಲಿ ಆನಲೈನ್ ಮೂಲಕ ದಿನಾಂಕ: 25–05–2026ರೊಳಗೆ ಸಲ್ಲಿಸುವುದು. ಆನಲೈನ್ ಮೂಲಕ ಬಂದ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗುವುದು. ಅಂಚೆ ಅಥವಾಕೊರಿಯರ್ ಅಥವಾ ಖುದ್ದಾಗಿ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ, ಇಗಾಗಿ ಸಮುದಾಯದ ಎಲ್ಲ ಪ್ರತಿಭಾನ್ವಿತ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಬೇಕೆಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಜಿಲ್ಲಾಧ್ಯಕ್ಷರಾದ ಜಿ.ಎನ್. ಪಾಟೀಲ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ರಸ್ತೆ ಅಭಿವೃದ್ಧಿ ಹಾಗೂ ಸೇತುವೆ ಕಾಮಗಾರಿಗೆ ಭೂಮಿ ಪೂಜೆ

**ಬೆಳಗಾವಿ ವಾರ್ತೆ ಕುಂದಗೋಳ:** ತಾಲೂಕಿನ ಶಿರೂರ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಕೈಗೆತ್ತಿಕೊಳ್ಳಲಾದ ಶಿರೂರ–ಹಿರೇನರ್ತಿ ಜಿಲ್ಲಾ ಮುಖ್ಯ ರಸ್ತೆಯ ಆಯ್ದ ಭಾಗದ ರಸ್ತೆ ಅಭಿವೃದ್ಧಿ ಹಾಗೂ ಸೇತುವೆ ನಿರ್ಮಾಣ ಕಾಮಗಾರಿಗೆ ಶಾಸಕ ಎಂ. ಆರ್. ಪಾಟೀಲ ಭೂಮಿ ಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಗ್ರಾಮೀಣ ಭಾಗದ ರಸ್ತೆ ಅಭಿವೃದ್ಧಿ ನನ್ನ ಅಧಿಕಾರದ ಅವಧಿಯಲ್ಲಿ ಆದ್ಯತೆ ನೀಡಲಾಗಿದ್ದು, ಉತ್ತಮ ರಸ್ತೆ ಸಂಪರ್ಕ ದಿಂದ ಗ್ರಾಮೀಣ ಪ್ರದೇಶಗಳ ಜನರ ಸಂಚಾರ ಸುಗಮವಾಗುವುದರ ಜೊತೆಗೆ ರೈತರು, ವಿದ್ಯಾರ್ಥಿಗಳು ಹಾಗೂ ಸಾರ್ವ ಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಿದರು.

ರಸ್ತೆ ಮತ್ತು ಸೇತುವೆ ನಿರ್ಮಾಣದಿಂದ ಮಳೆಗಾಲದ ಸಂದರ್ಭಗಳಲ್ಲಿ ಎದುರಾಗುವ ಸಂಚಾರ ಸಮಸ್ಯೆಗೆ ಪರಿಹಾರ ದೊರೆಯಲಿದ್ದು, ಶಿರೂರ  ಹಿರೇನರ್ತಿ ಭಾಗದ ಜನರಿಗೆ ಉತ್ತಮ ಸಂಪರ್ಕ ವ್ಯವಸ್ಥೆ ಕಲ್ಪಿಸಲಾಗುತ್ತದೆ,ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಿರುವ ಮೂಲಸೌಕರ್ಯಗಳನ್ನು ಹಂತ ಹಂತವಾಗಿ ಕಲ್ಪಿಸುವ ಕೆಲಸ ನಿರಂತರವಾಗಿ ನಡೆಯುತ್ತಿದ್ದು, ರಸ್ತೆ ಕಾಮಗಾರಿಗಳನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ,ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ಸಾರ್ವಜನಿಕರ ಸಹಕಾರವೂ ಅಗತ್ಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಾಬುಗೌಡ



ಪಾಟೀಲ, ಈಶ್ವರಪ್ಪ ಬೆಂಗೇರಿ, ಫಕ್ಕೀರಗೌಡ ಕುದರಿ, ಈಶ್ವರಗೌಡ ನಾಗನಗೌಡ್ರ, ಅಶೋಕ ಘೋರ್ಪಡೆ, ರುದ್ರಗೌಡ ಗೌಡಪ್ಪಗೌಡ್ರ, ಈಶ್ವರ ಸಾದರ, ಸುರೇಶ ಕೋಳೂರ, ಸಂತೋಷ ಬಡಿಗೇರ, ಸುರೇಶ ಬೆಂಗೇರಿ, ದಾನಪ್ಪ ಗಂಗಾಯಿ, ಬಸವರಾಜ ಕೊಪ್ಪದ, ಪೃಥ್ವಿರಾಜ್ ಕಾಳೆ, ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಶಿರೂರ ಹಾಗೂ ಹಿರೇನರ್ತಿ ಪಕ್ಷದ ಮುಖಂಡರು, ಗ್ರಾಮಸ್ಥರು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001